ಸಂಪುಟ 01 | ಸಂಚಿಕೆ 181 ಶನಿವಾರ 05 ಸೆಪ್ಟೆಂಬರ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಶಿಕ್ಷಕರ ದಿನ (Teachers' Day) ? ಭಾರತ
ಭಾರತದಲ್ಲಿ ಪ್ರತಿವರ್ಷ ಸೆಪ್ಟೆಂಬರ್ 5ರಂದು ಶಿಕ್ಷಕರ ದಿನ ಆಚರಿಸಲಾಗುತ್ತದೆ. ಈ ದಿನ ಭಾರತದ ಮಾಜಿ ರಾಷ್ಟ್ರಪತಿ, ತತ್ವಜ್ಞಾನಿ ಮತ್ತು ಶಿಕ್ಷಣತಜ್ಞ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನವನ್ನು ಸ್ಮರಿಸಲಾಗುತ್ತದೆ.

2. ಅಂತರರಾಷ್ಟ್ರೀಯ ದಾನ ದಿನ (International Day of Charity)
ಸೆಪ್ಟೆಂಬರ್ 5ರಂದು ವಿಶ್ವಸಂಸ್ಥೆಯ ಅಂತರರಾಷ್ಟ್ರೀಯ ದಾನ ದಿನವನ್ನು ಆಚರಿಸುತ್ತದೆ. ಬಡವರು ಮತ್ತು ಅಗತ್ಯವಿರುವವರಿಗೆ ಸಹಾಯ ಮಾಡುವ ದಾನ, ಸೇವೆ ಮತ್ತು ಮಾನವೀಯತೆಯ ಮಹತ್ವವನ್ನು ಈ ದಿನ ಸಾರುತ್ತದೆ.

3. ವಿಶ್ವದ ಮೂಲನಿವಾಸಿ ಮಹಿಳೆಯರು ಮತ್ತು ಬಾಲಕಿಯರ ಅಂತರರಾಷ್ಟ್ರೀಯ ದಿನ
ವಿಶ್ವಸಂಸ್ಥೆಯ ಪಟ್ಟಿಯ ಪ್ರಕಾರ ಸೆಪ್ಟೆಂಬರ್ 5ರಂದು International Day of the World's Indigenous Women and Girls ಕೂಡ ಆಚರಿಸಲಾಗುತ್ತದೆ.

## ಸುಭಾಷಿತ

ಉತ್ತಮವಾದುದು ಶ್ರಮವಿಲ್ಲದೇ ಲಭಿಸದು, ಇಚ್ಛೆಯಿಲ್ಲದಿದ್ದರಂತೂ ಅದು ಸಾಧ್ಯವೇ ಇಲ್ಲ.

–ಕುವೆಂಪು

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಮಳೆ ಕೊರತೆ ನೀಗಿಸಲು

## 28.52 ಕೋಟಿ ರೂ. ವೆಚ್ಚದ ಮೋಡ ಬಿತ್ತನೆಗೆ ಚಾಲನೆ

❏ ನೈಜ್ಯ ದೆಸೆ ನ್ಯೂಸ್



**ಬೆಂಗಳೂರು: ರಾಜ್ಯದಲ್ಲಿ ಮಳೆ ಕೊರತೆ ಹಾಗೂ ಎದುರಾಗಬಹುದಾದ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಕೈಗೆತ್ತಿಕೊಂಡಿರುವ ಮಹತ್ವಾಕಾಂಕ್ಷಿ ಮೋಡ ಬಿತ್ತನೆ ಯೋಜನೆಗೆ ಇಂದು ನಗರದ ಎಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಚಾಲನೆ ನೀಡಿದರು.**

ಮೋಡ ಬಿತ್ತನೆ ಕಾರ್ಯಾಚರಣೆಗೆ ಸಿದ್ಧಪಡಿಸಲಾಗಿರುವ ವಿಶೇಷ ಲಘು ವಿಮಾನಕ್ಕೆ ರಾಷ್ಟ್ರಧ್ವಜ ಹಾಗೂ ನಾಡಧ್ವಜ ತೋರುವ ಮೂಲಕ ಸಚಿವರು ಚಾಲನೆ ನೀಡಿದರು. ಯೋಜನೆ ಯಶಸ್ವಿಯಾಗಿ ಅನುಷ್ಠಾನಗೊಳ್ಳುವ ಮೂಲಕ ರಾಜ್ಯದ ಜಲಸಂಕಷ್ಟ ಕಡಿಮೆಯಾಗಲಿ ಹಾಗೂ ರೈತರಿಗೆ ಅನುಕೂಲವಾಗಲಿ ಎಂದು ಅವರು ಆಶಿಸಿದರು.

ಜಲಸಂಕಷ್ಟದ ಎಚ್ಚರಿಕೆ ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಚಲುವರಾಯಸ್ವಾಮಿ, ಪ್ರಸಕ್ತ ವರ್ಷ ರಾಜ್ಯದಲ್ಲಿ ಮಳೆಯ ಪ್ರಮಾಣ ಕಡಿಮೆಯಾಗಿದೆ. ಮುಂದಿನ ದಿನಗಳಲ್ಲಿ ತೀವ್ರ ಬರ ಪರಿಸ್ಥಿತಿ ಎದುರಾಗುವ ಸಾಧ್ಯತೆಯಿದ್ದು, ಅದರ ಪ್ರಮಾಣವನ್ನು ಈಗಲೇ ನಿಖರವಾಗಿ ಅಂದಾಜಿಸಲು ಸಾಧ್ಯವಿಲ್ಲ ಎಂದರು. ಸೆಪ್ಟೆಂಬರ್ ಅಂತ್ಯದ ವೇಳೆಗೆ ಮುಂಗಾರು ಮುಕ್ತಾಯಗೊಳ್ಳಲಿದ್ದು, ಅಷ್ಟರೊಳಗೆ ಕುಡಿಯುವ ನೀರಿನ ಅಗತ್ಯ ಪ್ರಮಾಣದ ಶೇಖರಣೆಯಾಗದಿದ್ದರೆ ಮುಂದಿನ ಜೂನ್‌ವರೆಗೆ ನೀರಿನ ತೀವ್ರ ಅಭಾವ ಎದುರಾಗುವ ಸಾಧ್ಯತೆಯಿದೆ ಎಂದು ಎಚ್ಚರಿಸಿದರು.

ನೀರಿನ ಕೊರತೆಯನ್ನು ಸರಿದೂಗಿಸಲು ಹಾಗೂ ರೈತರ ಹಿತದೃಷ್ಟಿಯಿಂದ ಮೋಡ ಬಿತ್ತನೆಗೆ ಮುಂದಾಗಿದ್ದೇವೆ. ಈ ಹಿಂದೆ ನಡೆದ ಮೋಡ ಬಿತ್ತನೆ ಕಾರ್ಯಾಚರಣೆ ಶೇ.35ರಷ್ಟು ಯಶಸ್ವಿಯಾಗಿತ್ತು. ಏನೇ ನಷ್ಟ ಅಥವಾ ಲಾಭವಾದರೂ ಯೋಜನೆಯಿಂದ ಜನರಿಗೆ ಒಳಿತಾಗಬೇಕು ಎಂಬುದೇ ಸರ್ಕಾರದ ಆಶಯ. ನಾಡಿನ ಹಿತ ಕಾಯುವುದೇ ನಮ್ಮ ಆದ್ಯತೆ ಎಂದು ಅವರು ಹೇಳಿದರು.

28.52 ಕೋಟಿ ರೂ. ಯೋಜನೆ ಮೋಡ ಬಿತ್ತನೆ ಯೋಜನೆಗೆ ಜಿಎಸ್‌ಟಿ ಹೊರತುಪಡಿಸಿ ಒಟ್ಟು 28.52 ಕೋಟಿ ರೂ. ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಜಲಸಂಪನ್ಮೂಲ ಇಲಾಖೆಯ ಕರ್ನಾಟಕ ನೀರಾವರಿ ನಿಗಮ ನಿಯಮಿತ ಹಾಗೂ ಕಂದಾಯ ಇಲಾಖೆಯ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (ಕೆಎಸ್‌ಎನ್‌ಡಿಎಂಸಿ) ಜಂಟಿಯಾಗಿ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿವೆ. ಮೋಡ ಬಿತ್ತನೆ ಕಾರ್ಯವನ್ನು ಸಂಸ್ಥೆಗೆ ಕೆಟಿಪಿಪಿ ಕಾಯ್ದೆಯಡಿ ವಿನಾಯಿತಿ ನೀಡಿ ಗುತ್ತಿಗೆ ನೀಡಲಾಗಿದೆ. ಯೋಜನೆಯ ಮೇಲ್ವಿಚಾರಣೆ ಹಾಗೂ ತಾಂತ್ರಿಕ ಮೌಲ್ಯಮಾಪನಕ್ಕಾಗಿ ಸರ್ಕಾರ ಎರಡು ಪ್ರತ್ಯೇಕ ಸಮಿತಿಗಳನ್ನು ರಚಿಸಿದೆ.

ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ನೇತೃತ್ವದ ಮೇಲ್ವಿಚಾರಣಾ ಸಮಿತಿ ಯೋಜನೆಯ ಸಮಗ್ರ ಉಸ್ತುವಾರಿ ವಹಿಸಲಿದೆ. ಕೆಎಸ್‌ಎನ್‌ಡಿಎಂಸಿ ನಿರ್ದೇಶಕರ ಅಧ್ಯಕ್ಷತೆಯ ಎಂಟು ಸದಸ್ಯರ ತಾಂತ್ರಿಕ ಸಲಹಾ ಮತ್ತು ಮೌಲ್ಯಮಾಪನ ಸಮಿತಿ ಕಾರ್ಯಾಚರಣೆಗೆ ಮಾರ್ಗದರ್ಶನ ನೀಡಲಿದೆ.ರಾಡಾರ್‌ಮೂಲಕ ಮೋಡಗಳ ಗುರುತು ಮೋಡ ಬಿತ್ತನೆ ಎನ್ನುವುದು ಮೋಡಗಳಲ್ಲಿರುವ ತೇವಾಂಶವನ್ನು ಮಳೆಯಾಗಿ ಪರಿವರ್ತನೆಯಾಗುವ ಪ್ರಕ್ರಿಯೆಯನ್ನು ಉತ್ತೇಜಿಸುವ ವೈಜ್ಞಾನಿಕ ವಿಧಾನವಾಗಿದೆ. ಮೋಡಗಳ ಸ್ವರೂಪಕ್ಕೆ ಅನುಗುಣವಾಗಿ ಸಿಲ್ವರ್ ಅಯೋಡೈಡ್, ಪೊಟ್ಯಾಸಿಯಮ್ ಅಯೋಡೈಡ್, ಡ್ರೈ ಐಸ್ ಅಥವಾ ಸೋಡಿಯಂ ಕ್ಲೋರೈಡ್‌ನಂತಹ ಕಣಗಳನ್ನು ಬಳಸಲಾಗುತ್ತದೆ.

ಹವಾಮಾನ ರಾಡಾರ್ ಮೂಲಕ ಗಾಳಿಯ ವೇಗ, ತೇವಾಂಶ, ಮೋಡಗಳ ಸಾಂದ್ರತೆ ಸೇರಿದಂತೆ ವಿವಿಧ ಅಂಶಗಳನ್ನು ನಿರಂತರವಾಗಿ ಪರಿಶೀಲಿಸಲಾಗುತ್ತದೆ. ಮಳೆ ಸುರಿಸುವ ಸಾಮರ್ಥ್ಯ ಹೊಂದಿರುವ ಸೂಕ್ತ ಮೋಡಗಳು ಕಂಡುಬಂದಾಗ ವಿಶೇಷ ವಿಮಾನದ ಮೂಲಕ ಅವುಗಳೊಳಗೆ ಅಥವಾ ಕೆಳಭಾಗದಲ್ಲಿ ಅಗತ್ಯ ವಸ್ತುಗಳನ್ನು ಸಿಂಪಡಿಸಲಾಗುತ್ತದೆ. ಸೂಕ್ತ ಪ್ರದೇಶಗಳಿಗೆ ವಿಮಾನ ಮೋಡ ಬಿತ್ತನೆಗೆ ಯಾವುದೇ ಜಿಲ್ಲೆಯನ್ನು ಮೊದಲೇ ನಿಗದಿಪಡಿಸಲಾಗುವುದಿಲ್ಲ. ತಾಂತ್ರಿಕ ತಂಡ ನೀಡುವ ಹವಾಮಾನ ವರದಿಯ ಆಧಾರದ ಮೇಲೆ ಮಳೆ ಕೊರತೆ ಇರುವ ಪ್ರದೇಶಗಳು, ಪ್ರಮುಖ ಜಲಾಶಯಗಳ ಜಲಾನಯನ ಪ್ರದೇಶಗಳು ಹಾಗೂ ಕೃಷಿ ಬಿಕ್ಕಟ್ಟು ಎದುರಿಸುತ್ತಿರುವ ಜಿಲ್ಲೆಗಳಿಗೆ ಆದ್ಯತೆ ನೀಡಲಾಗುತ್ತದೆ.

ಪ್ರತಿ ಎರಡು ಗಂಟೆಗೊಮ್ಮೆ ಲಭ್ಯವಾಗುವ ಹವಾಮಾನ ದತ್ತಾಂಶದ ಆಧಾರದ ಮೇಲೆ ಕಾರ್ಯಾಚರಣೆಯ ಸ್ಥಳವನ್ನು ನಿರ್ಧರಿಸಲಾಗುತ್ತದೆ. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಜಿ.ಸಿ.ಚಂದ್ರಶೇಖರ್, ಮಾಜಿ ಸಚಿವ ಎಚ್.ಕೆ.ಪಾಟೀಲ್, ಶಾಸಕ ಕೋನರೆಡ್ಡಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ನಾಲ್ಕು ತಿಂಗಳು ಕಳೆದರೂ ಹೈ ಮಾಸ್ಕ್ ವಿದ್ಯುತ್ ದೀಪ ಕೆಟ್ಟು ನಿಂತು. ರಿಪೇರಿ ಯಾವಾಗ?

❏ ನೈಜ್ಯ ದೆಸೆ ನ್ಯೂಸ್

**ಯಾದಗಿರಿ: ಜಿಲ್ಲೆಯ ಹುಣಸಗಿ ತಾಲೂಕಿನ ಯಡಿಯಾಪುರ ಗ್ರಾಮದಲ್ಲಿ ಕಳೆದ ನಾಲ್ಕೈದು ತಿಂಗಳಿಂದ ಹೈ ಮಾಸ್ಕ್ ವಿದ್ಯುತ್ ದೀಪ ಕೆಟ್ಟರು. ರಿಪೇರಿ ಮಾಡಿಕೊಡದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯ ಮೇಲೆ ಯಡಿಯಾಪುರ ಗ್ರಾಮದ ಕಾಂಗ್ರೆಸ್ ಪಕ್ಷದ ಮುಖಂಡರಾದ.**



ಆಮಲಿಂಗಪ್ಪ ಕೆಂಭಾವಿ ಇವರು ಆಕ್ರೋಶ ವ್ಯಕ್ತಪಡಿಸಿದರು. ಇನ್ನು ಎರಡು ಮೂರು ದಿನದಲ್ಲಿ ಹೈ ಮಾಸ್ಕ ವಿದ್ಯುತ್ ದೀಪ ರಿಪೇರಿ ಮಾಡಿಕೊಡದಿದ್ದರೆ ಗ್ರಾಮ ಪಂಚಾಯಿತಿಗೆ ಬೀಗ ಜಡೆದು ಉಗ್ರ ಹೋರಾಟ ಮಾಡಲಾಗುವುದೆಂದು ಎಚ್ಚರಿಸಿದರು. ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಯಡಿಯಾಪುರ ಗ್ರಾಮದ ಬಗ್ಗೆ ಮಲತಾಯಿ ಧೋರಣೆ ತೋರುವ ಎದರ ಸಲುವಾಗಿ ಅನ್ನುವುದೇ ದಿಕ್ಕು ತೋರಿಸ್ತಾ ಇಲ್ಲ ಎಂದು ಈ ಸಂದರ್ಭದಲ್ಲಿ ಹೇಳಿದರು. ಯಡಿಯಾಪುರ ಗ್ರಾಮದಲ್ಲಿ ಜಸ್ಕಾಂ ಇಲಾಖೆಯ ವೈರಿಗಳು ಹಳೆಯದಾಗಿದ್ದು. ಎಲ್ಲಿಂದರಲ್ಲಿ ಕಟ್ಟಾಗಿ ಬೀಳುತ್ತಾ ಇದ್ದಾವೆ ತಾಲೂಕ್ ಆಡಳಿತ ಗಮನ ಹರಿಸಬೇಕು. ಹಾಗೆ ಯಡಿಯಾಪುರ ಗ್ರಾಮಕ್ಕೆ ಸರ್ಕಾರದಿಂದ ಬರುವ ತಕ್ಕಂತ ಸೌಲಭ್ಯಗಳನ್ನು ಗ್ರಾಮ ಪಂಚಾಯತಿ ಸಿಬ್ಬಂದಿಗಳು ಒದಗಿಸಿ ಕೊಡಬೇಕೆಂದು ಆಗ್ರಹಿಸಿದರು. ಇದೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಮತ್ತು ಯಡಿಯಾಪುರ ಗ್ರಾಮದ ಸಾರ್ವಜನಿಕರು ಪಾಲ್ಗೊಂಡಿದ್ದರು.

# ತಾಯಮ್ಮ ದೇವಿ ಜಾತ್ರಾ ಮಹೋತ್ಸವ:

## ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಗೆ ಅದ್ದೂರಿ ಚಾಲನೆ ಪ್ರಥಮ ಬಹುಮಾನ ?11 ಸಾವಿರ 120 ಕೆಜಿ ಕಲ್ಲು ಎತ್ತುವವರಿಗೆ ವಿಶೇಷ ಬಹುಮಾನ

❏ ನೈಜ್ಯ ದೆಸೆ ನ್ಯೂಸ್



**ಮಾನ್ವಿ: ಪಟ್ಟಣದ ತಾಯಮ್ಮ ದೇವಿ ಜಾತ್ರಾ ಮಹೋತ್ಸವ ಹಾಗೂ ದಿವಂಗತ ಸೊಸೈಟಿ ಹನುಮಂತಪ್ಪ ಮೇಸ್ತ್ರಿ ಅವರ ಸ್ಮರಣಾರ್ಥ ಪ್ರಪ್ರಥಮ ಬಾರಿಗೆ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯನ್ನು ಆಯೋಜಿಸಲಾಗಿದೆ.**

ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಜಿಲ್ಲಾಧ್ಯಕ್ಷ ಬಿ. ರಾಮಣ್ಣ ನಾಯಕ ಅವರು ಚಾಲನೆ ನೀಡಿ ಸ್ಪರ್ಧೆಯ ಬಹುಮಾನಗಳನ್ನು ಘೋಷಿಸಿದರು. ಪ್ರಥಮ ಬಹುಮಾನವಾಗಿ 11,000, ದ್ವಿತೀಯ ಬಹುಮಾನವಾಗಿ 5,000 ಹಾಗೂ ತೃತೀಯ ಬಹುಮಾನವಾಗಿ 3,000 ನೀಡಲಾಗುವುದು. ಅಲ್ಲದೆ, 120 ಕೆಜಿ ತೂಕದ ಸಂಗ್ರಾಣಿ ಕಲ್ಲನ್ನು ಎತ್ತುವ ಸ್ಪರ್ಧಾರ್ಥಿಗೆ ವಿಶೇಷ ಬಹುಮಾನವಾಗಿ 5,000 ನೀಡಲಾಗುವುದು ಎಂದು ತಿಳಿಸಿದರು.

ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಅವರು ತಾಯಮ್ಮ ದೇವಿಯ ಆಶೀರ್ವಾದ ಪಡೆದು ಮಾತನಾಡಿ, ಜಾತ್ರಾ ಮಹೋತ್ಸವದ ಅಂಗವಾಗಿ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯನ್ನು ಆಯೋಜಿಸಿರುವುದು ಹೆಮ್ಮೆಯ ಸಂಗತಿ. ಇಂತಹ ಜಾನಪದ ಸಾಂಪ್ರದಾಯಿಕ ಕ್ರೀಡೆಗಳು ಯುವಕರಲ್ಲಿ ಉತ್ಸಾಹ ಹಾಗೂ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ ನಮ್ಮ ಗ್ರಾಮೀಣ ಸಂಸ್ಕೃತಿಯನ್ನು ಉಳಿಸುವಲ್ಲಿ ಸಹಕಾರಿಯಾಗುತ್ತವೆ ಎಂದು ಹೇಳಿದರು.

ಜಾತ್ರಾ ಮಹೋತ್ಸವದ ಅಂಗವಾಗಿ ತಾಯಮ್ಮ ದೇವಿಯ ದರ್ಶನ ಪಡೆದುಕೊಂಡ ಭಕ್ತಾದಿಗಳು ಪ್ರಸಾದ ಸ್ವೀಕರಿಸಿದರು. ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆ ವೀಕ್ಷಕರ ಗಮನ ಸೆಳೆಯಿತು.ಪ್ರಥಮ ಬಹುಮಾನ ಪ್ರಕಾಶ ಕೊತ್ತದೊಡ್ಡಿ ದ್ವಿತೀಯ ಬಹುಮಾನ ನರಸಿಂಹ ಮಲಿಯಬಾದ ತೃತೀಯ ಬಹುಮಾನವನ್ನು ಗೋವಿಂದ ಬಿಜಿನಗೇರ್ ಮತ್ತು ಆಂಜನೇಯ ದೇವದುರ್ಗ ಪಡೆದುಕೊಂಡರು.

ಈ ಸಂದರ್ಭದಲ್ಲಿ ನಾಯ್ಡು ನಾಯಕ, ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಮಾನ್ವಿ ತಾಲೂಕು ಅಧ್ಯಕ್ಷ ದೇವರಾಜ್ ನಾಯಕ, ತಾಲೂಕು ಪ್ರಧಾನ ಕಾರ್ಯದರ್ಶಿ ಕೊಂಡಯ್ಯ ನಾಯಕ, ಮಂಜುನಾಥ ನಾಯಕ, ಜೆಲ್ಲಿ ಅಂಜಿನೇಯ್ಯ ನಾಯಕ ನೀರಮಾನ್ವಿ, ಆಂಜನೇಯ ನಾಯಕ ನಸಲಾಪುರ,ಯಲ್ಲಪ್ಪ ನಾಯಕ, ತಾಯಣ್ಣ ನಾಯಕ,ಅಭಿ,ವಿನೋದ ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಕಸಬಾಲಿಂಗಸೂಗೂರಿನಲ್ಲಿ ಅಂಜುಮನ್ ಕಮಿಟಿಯಿಂದ ಮಕ್ತಬ್ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಮಗ್ರಿ ವಿತರಣೆ

❏ ನೈಜ್ಯ ದೆಸೆ ನ್ಯೂಸ್



**ಲಿಂಗಸೂಗೂರು: ಹಜರತ್ ಮೊಹಮ್ಮದ್ ಪೈಗಂಬರ್ (ಸ) ಅವರ ಪವಿತ್ರ ಜನ್ಮದಿನದ ಪ್ರಯುಕ್ತ ಅಂಜುಮನ್-ಎ-ಮುಸ್ಲಿಮೀನ್ ಲಿಂಗಸೂಗೂರು ತಾಲೂಕು ಕಮಿಟಿ ವತಿಯಿಂದ ಕಸಬಾಲಿಂಗಸೂಗೂರು ಗ್ರಾಮದ ಮಕ್ತಬ್‌ನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬ್ಯಾಗ್,ಬೂಟು,ಪುಸ್ತಕ ಹಾಗೂ ಪೆನ್ನುಗಳನ್ನು ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.**

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಉತ್ತೇಜನ ನೀಡುವ ಹಾಗೂ ಶಿಕ್ಷಣದ ಬಗ್ಗೆ ಆಸಕ್ತಿ ಬೆಳೆಸುವ ಉದ್ದೇಶದಿಂದ ಆಯೋಜಿಸಲಾಗಿದ್ದ ಈ ಕಾರ್ಯಕ್ರಮದಲ್ಲಿ ಮಕ್ತಬ್‌ನ ಎಲ್ಲಾ ವಿದ್ಯಾರ್ಥಿಗಳಿಗೆ ಅಗತ್ಯ ಶೈಕ್ಷಣಿಕ ಸಾಮಗ್ರಿಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಕಸಬಾಲಿಂಗಸೂಗೂರು ಗ್ರಾಮದ ಜಾಮಿಯಾ ಮಸ್ಜಿದ್ ಕಮಿಟಿಯ ಅಧ್ಯಕ್ಷರಾದ ಜನಾಬ್ ಖಾಜಾಸಾಬ್ ಗೊಲ್ಲಗೇರಿ, ಉಪಾಧ್ಯಕ್ಷರಾದ ಮೈನುದ್ದಿನ್ ಕಾರ್ಪೆಂಟರ್, ಜನಾಬ್ ಹಾಜಿ ಅಲ್ಲಸಾಬ್ ಹಿರೇಮನಿ, ಅಲ್ಲಸಾಬ್ ಹೋಟೆಲ್, ಜನಾಬ್ ಇಬ್ರಾಹಿಂ ಹಾಫಿಜ್ ಸಾಬ್, ಜನಾಬ್ ಖಾಸಿಂಸಾಬ್ ಬಾಗವಾನ್, ಜನಾಬ್ ಅಮೀನ್ ಸಾಬ್ ಬಾಗವಾನ್, ಜನಾಬ್ ದಾವಲ್ ಸಾಬ್ ಹಣಗಿ, ಜನಾಬ್ ಇಬ್ರಾಹಿಂ ಬಾಗವಾನ್, ಜನಾಬ್ ಖಾಜಾಸಾಬ್ ಹಿರೇಮನಿ, ಮೊಹಮ್ಮದ್ ಭಾಗವಾನ್ ಸೇರಿದಂತೆ ಗ್ರಾಮದ ಗುರುಹಿರಿಯರು ಹಾಗೂ ಸಹೋದರರು ಉಪಸ್ಥಿತರಿದ್ದರು.

ಅಂಜುಮನ್-ಎ-ಮುಸ್ಲಿಮೀನ್ ಲಿಂಗಸೂಗೂರು ತಾಲೂಕು ಕಮಿಟಿಯ ಗೌರವ ಅಧ್ಯಕ್ಷರಾದ ಅನ್ಸರುದ್ದಿನ್, ಅಧ್ಯಕ್ಷರಾದ ಹುಸೇನ್ ಭಾಷಾ, ಪ್ರಧಾನ ಕಾರ್ಯದರ್ಶಿ ಸಲೀಂ ಪಾಷಾ ಕಾರ್ಪೆಂಟರ್, ವಸೀಂ ಪಾಷಾ, ಅಮೀನುದ್ದಿನ್ ಟೈಲರ್, ವಸೀಂ ಅಕ್ರಂ, ಶೇಖ್ ಅಲಿ, ನಸೀಮ್, ಉಬೆದ್ ಚೌದ್ರಿ, ಆರೀಫ್, ಆಸೀಫ್, ದಾವಲ್ ಸಾಬ್, ಆದಿಲ್, ಉಮರ್, ಸದ್ದಾಂ ಸೇರಿದಂತೆ ಕಮಿಟಿಯ ಪದಾಧಿಕಾರಿಗಳು ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಅಗತ್ಯ ಸಹಕಾರ ನೀಡುವ ಮೂಲಕ ಸಮುದಾಯದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುವುದು ಅಂಜುಮನ್-ಎ-ಮುಸ್ಲಿಮೀನ್ ಲಿಂಗಸೂಗೂರು ತಾಲೂಕು ಕಮಿಟಿಯ ಪ್ರಮುಖ ಸಾಮಾಜಿಕ ಕಾಳಜಿಗಳಲ್ಲಿ ಒಂದಾಗಿದೆ ಎಂದು ಕಮಿಟಿಯವರು ತಿಳಿಸಿದರು.

# ಸಾಹಿತ್ಯ ಸಿಂಚನ

## ಹೂವಿನ ಕನಸು

ಮೌನದ ತೋಟದ ಮೂಲೆಯಲ್ಲಿ,
ಒಂದು ಪುಟ್ಟ ಮೊಗ್ಗು ಮಲಗಿತ್ತು,
ಕನಸುಗಳ ಬಣ್ಣ ಹೊತ್ತುಕೊಂಡು,
ಹೊಸ ಬೆಳಗಿಗಾಗಿ ಕಾದಿತ್ತು.

ಮಂಜಿನ ಹನಿಯ ಸ್ಪರ್ಶದಲ್ಲಿ,
ಮನದ ಮಾತು ಹೇಳಿಕೊಂಡಿತು,
ಸೂರ್ಯನ ಮೊದಲ ಕಿರಣದಲ್ಲಿ,
ತನ್ನ ಭವಿಷ್ಯ ಕಂಡುಕೊಂಡಿತು.

ಗಾಳಿ ಬಂದು ತೂಗಿಸಿದರೂ,
ಬೇರುಗಳನ್ನು ಬಿಡಲಿಲ್ಲ,
ಮಳೆ ಬಂದು ನೆನೆಸಿದರೂ,
ಕನಸನ್ನು ಮರೆಯಲಿಲ್ಲ.

ಮುಳ್ಳುಗಳ ನಡುವೆ ಬೆಳೆದರೂ,
ಮುಳ್ಳಿನ ನೋವಿಗೆ ಹೆದರಲಿಲ್ಲ,
ಅರಳುವ ದಿನದ ನಿರೀಕ್ಷೆಯಲ್ಲಿ,
ಪ್ರತಿದಿನವೂ ನಗುತ್ತಿತ್ತು.

ಚಿಟ್ಟೆಯೊಂದು ಬಂದು ಹೇಳಿತು,
"ನಿನ್ನ ಬಣ್ಣ ತುಂಬಾ ಸುಂದರ,"
ಹೂವು ನಕ್ಕು ಉತ್ತರಿಸಿತು,
"ಕನಸುಗಳೇ ನನ್ನ ನಿಜವಾದ ಅಲಂಕಾರ."


ಒಂದು ಬೆಳಗ್ಗೆ ನಿಧಾನವಾಗಿ,
ಮೊಗ್ಗು ಹೂವಾಗಿ ಅರಳಿತು,
ತನ್ನ ಸಣ್ಣ ಕನಸಿನೊಳಗೆ,
ಇಡೀ ತೋಟವನ್ನೇ ತುಂಬಿತು.

ಹೂವಿನಂತೆ ನಮ್ಮ ಬದುಕೂ,
ಒಂದು ದಿನ ಅರಳಲೇಬೇಕು,
ಕಷ್ಟಗಳ ನಡುವೆ ಕನಸು ಹಿಡಿದು,
ಮುಂದೆ ಸಾಗುತ್ತಲೇ ಇರಬೇಕು.

## ಲೋಕ ಕಲ್ಯಾಣಕ್ಕಾಗಿ ಬಿ.ಗಣೇಕಲ್ ಭಕ್ತರಿಂದ 19ನೇ ವರ್ಷದ ಹನುಮಯ್ಯ ತಾತನ ಸನ್ನಿಧಿಗೆ ಪಾದಯಾತ್ರೆ

ನೈಜ್ಯ ದೆಸೆ ನ್ಯೂಸ್

**ಅರಕೇರಾ: ತಾಲೂಕಿನ ಬಿ.ಗಣೇಕಲ್ ಗ್ರಾಮದ ಶ್ರೀ ಮಾರುತೇಶ್ವರ ಭಜನಾ ಮಂಡಳಿ ಹಾಗೂ ಭಕ್ತರ ವತಿಯಿಂದ ಶ್ರಾವಣ ಮಾಸದ ಅಂಗವಾಗಿ ಸತತ 19ನೇ ವರ್ಷದಂತೆ ರಾಯಚೂರು ಜಿಲ್ಲೆ ಮಾನ್ವಿ ತಾಲೂಕಿನ ಅವಧೂತ ಬೆಟ್ಟದ ಗವಿ ಶ್ರೀ ಹನುಮಯ್ಯ ತಾತನ ದೇವಸ್ಥಾನಕ್ಕೆ ಪಾದಯಾತ್ರೆ ಹಮ್ಮಿಕೊಳ್ಳಲಾಯಿತು.**



ಬಿ.ಗಣೇಕಲ್ ಗ್ರಾಮದ ಹಿರಿಯರಾದ ಮುದುಕಣ್ಣ ಪೂಜಾರಿ ಅವರ ಆಶೀರ್ವಾದದೊಂದಿಗೆ, ಅರ್ಚಕರಾದ ಮಲ್ಲಯ್ಯ ಪೂಜಾರಿ ಹಾಗೂ ನರಸಿಂಹ ಪೂಜಾರಿ ಅವರ ನೇತೃತ್ವದಲ್ಲಿ ಭಕ್ತರು ಅತ್ಯಂತ ಭಕ್ತಿ ಭಾವದಿಂದ ಪಾದಯಾತ್ರೆಗೆ ಚಾಲನೆ ನೀಡಿದರು. ಈ ಪಾದಯಾತ್ರೆಯು ಈ ಭಾಗದ ಅತ್ಯಂತ ಪ್ರಮುಖ ಧಾರ್ಮಿಕ ಆಚರಣೆಗಳಲ್ಲಿ ಒಂದಾಗಿದೆ. ಭಕ್ತರು ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಹಾಗೂ ಲೋಕ ಕಲ್ಯಾಣಕ್ಕಾಗಿ ವಿವಿಧ ಹಳ್ಳಿ ಹಾಗೂ ಪಟ್ಟಣಗಳಿಂದ ಮಾನ್ವಿ ಬೆಟ್ಟದಲ್ಲಿರುವ ತಾತನ ಸನ್ನಿಧಿಗೆ ಕಾಲ್ನಡಿಗೆಯ ಮೂಲಕ ಸಾಗುತ್ತಾರೆ. ಪಾದಯಾತ್ರೆಯುದ್ದಕ್ಕೂ ಭಕ್ತರು ತಾತನ ನಾಮಸ್ಮರಣೆ ಮಾಡುತ್ತಾ, ಭಜನೆಗಳನ್ನು ಹಾಡುತ್ತಾ ಸಾಗುವುದು ವಿಶೇಷವಾಗಿತ್ತು. ಈ ಪಾದಯಾತ್ರೆಯಲ್ಲಿ ಬಾಲಯ್ಯ ದೊರೆ, ತಮ್ಮಣ್ಣ, ಅಬಕಾರಿ ಹನುಮಂತರಾಯ, ಮಸರಕಲ್ ಬಾಲಗೌಡ, ಮಲ್ಲಯ್ಯ ಕೆ., ಬಸವರಾಜ, ಸೂಗಪ್ಪ, ಮಾ.ಪಾ.ಮಾಗಣಯ್ಯ, ನಾಗರಾಜ, ಚನ್ನಪ್ಪ ಸೇರಿದಂತೆ ಅನೇಕ ಭಕ್ತರು ಭಾಗವಹಿಸಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ದಾವಣಗೆರೆ ಕುಟುಂಬ ನ್ಯಾಯಾಲಯದ ನ್ಯಾಯಾಧೀಶರ ಮಾನವೀಯ ಸೇವೆಗೆ ಗೌರವ: ರಾಯಚೂರಿನಲ್ಲಿ ೦ಖಒಖಒ ಮನವಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ದಾವಣಗೆರೆ ಕುಟುಂಬ ನ್ಯಾಯಾಲಯದಲ್ಲಿ ವಿಚ್ಛೇದನ ಕೋರಿ ನ್ಯಾಯಾಲಯದ ಮೆಟ್ಟಿಲೇರಿದ್ದ 37 ದಂಪತಿಗಳೊಂದಿಗೆ ಸತತ ಸಮಾಲೋಚನೆ ನಡೆಸಿ, ಕೌಟುಂಬಿಕ ಸಂಬಂಧಗಳ ಮಹತ್ವವನ್ನು ಮನವರಿಕೆ ಮಾಡಿಕೊಟ್ಟು ಕುಟುಂಬಗಳನ್ನು ಉಳಿಸಲು ಪ್ರಯತ್ನಿಸಿದ ನ್ಯಾಯಾಧೀಶರ ಮಾನವೀಯ ಸೇವೆಯನ್ನು ಗುರುತಿಸಿ ಅಭಿನಂದಿಸಿ ಗೌರವಿಸುವಂತೆ ಆಲ್ ಇಂಡಿಯಾ ಮಜ್ಲಿಸ್–ಎ–ಇತ್ತೆಹಾದುಲ್ ಮುಸ್ಲಿಮೀನ್ (AIMIM) ರಾಯಚೂರು ನಗರ ಘಟಕ ಒತ್ತಾಯಿಸಿದೆ.**

ಈ ಕುರಿತು AIMIM ರಾಯಚೂರು ನಗರ ಅಧ್ಯಕ್ಷ ಶಬ್ಬೀರ್ ಅಹ್ಮದ್ ಹವಾಲ್ದಾರ್ ಅವರು ಕರ್ನಾಟಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದ್ದು, ಜಿಲ್ಲಾಧಿಕಾರಿಗಳ ಮೂಲಕ ಮನವಿಯನ್ನು ರವಾನಿಸಿದ್ದಾರೆ. ಮನವಿಯನ್ನು ಶಿವಾನಂದ ಭಜಂತ್ರಿ ಅವರು ರಾಯಚೂರು ಜಿಲ್ಲೆಯ ಅಪರ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದರು.




ದಾಂಪತ್ಯ ಜೀವನದಲ್ಲಿನ ತೀವ್ರ ಮನಸ್ತಾಪ, ಭಿನ್ನಾಭಿಪ್ರಾಯ ಹಾಗೂ ಕೌಟುಂಬಿಕ ಸಮಸ್ಯೆಗಳಿಂದ ವಿಚ್ಛೇದನ ಬಯಸಿ ನ್ಯಾಯಾಲಯಕ್ಕೆ ಬಂದಿದ್ದ 37 ದಂಪತಿಗಳ ಪ್ರಕರಣಗಳಲ್ಲಿ, ನ್ಯಾಯಾಧೀಶರು ಕೇವಲ ಕಾನೂನು ಪ್ರಕ್ರಿಯೆಗೆ ಸೀಮಿತವಾಗದೆ ಮಾನವೀಯ ದೃಷ್ಟಿಕೋನದಿಂದ ದಂಪತಿಗಳ ಸಮಸ್ಯೆಗಳನ್ನು ಆಲಿಸಿ, ಸತತ ಸಮಾಲೋಚನೆ ನಡೆಸಿ ಕುಟುಂಬಗಳನ್ನು ಉಳಿಸಲು ಪ್ರಯತ್ನಿಸಿರುವುದು ಶ್ಲಾಘನೀಯ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ದಂಪತಿಗಳ ನಡುವೆ ಪರಸ್ಪರ ಅರ್ಥ–'ೈಸಿಕೊಳ್ಳುವಿಕೆ, ಜವಾಬ್ದಾರಿ, ಕೌಟುಂಬಿಕ ಮೌಲ್ಯಗಳು ಹಾಗೂ ಮಕ್ಕಳ ಭವಿಷ್ಯದ ಮಹತ್ವವನ್ನು ಮನವರಿಕೆ ಮಾಡಿಕೊಟ್ಟಿರುವುದು ಸಮಾಜಕ್ಕೆ ಪ್ರೇರಣಾದಾಯಕವಾಗಿದೆ. ಒಂದು ಕುಟುಂಬವನ್ನು ಉಳಿಸುವುದರಿಂದ ದಾಂಪತ್ಯ ಸಂಬಂಧದ ಜೊತೆಗೆ ಮಕ್ಕಳ ಭವಿಷ್ಯ, ಕುಟುಂಬದ ನೆಮ್ಮದಿ ಹಾಗೂ ಸಾಮಾಜಿ–ಕ ಸೌಹಾರ್ದತೆಯನ್ನೂ ಕಾಪಾಡಿದಂತಾಗುತ್ತದೆ ಎಂದು AIMIM ಅಭಿಪ್ರಾಯಪಟ್ಟಿದೆ.

ನ್ಯಾಯಾಲಯವು ಕೇವಲ ವಿವಾದಗಳಿಗೆ ತೀರ್ಪು ನೀಡುವ ಸ್ಥಳವಾಗಿರದೆ, ಅಗತ್ಯ ಸಂದರ್ಭಗಳಲ್ಲಿ ಮಾನವೀಯ ದೃಷ್ಟಿಕೋನದಿಂದ ಕುಟುಂಬಗಳ ನಡುವೆ ಸಂವಾದ ಮತ್ತು ಸಮನ್ವಯ ಮೂಡಿಸಲು ಸಹಕಾರ ನೀಡಬಲ್ಲ ಸಂಸ್ಥೆಯಾಗಿದೆ ಎಂಬುದನ್ನು ನ್ಯಾಯಾಧೀಶರ ಈ ಕಾರ್ಯ ತೋರಿಸಿಕೊಟ್ಟಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ದಾವಣಗೆರೆ ಕುಟುಂಬ ನ್ಯಾಯಾಲಯದ ನ್ಯಾಯಾಧೀಶರ ಮಾನವೀಯ ಹಾಗೂ ಸಮಾಜಮುಖಿ ಸೇವೆಯನ್ನು ರಾಜ್ಯಪಾಲರ ಗಮನಕ್ಕೆ ತಂದು, ಸೂಕ್ತ ರೀತಿಯಲ್ಲಿ ಅಭಿನಂದಿಸಿ ಗೌರವಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ೦ಖಒಖಒ ಒತ್ತಾಯಿಸಿದೆ.

ಈ ಮನವಿಯ ಪ್ರತಿಯನ್ನು ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರಿಗೂ ಸಲ್ಲಿಸಲಾಗಿದೆ. ಈ ಸಂದರ್ಭದಲ್ಲಿ ೦ಖಒಖಒ ರಾಯಚೂರು ಪ್ರಧಾನ ಕಾರ್ಯದರ್ಶಿ ಶೈಬಾಜ್ ಖಾನ್, ಜಂಟಿ ಕಾರ್ಯದರ್ಶಿ ಇರ್ಫಾನ್ ಖಾನ್, ವಾರ್ಡ್ ನಂ.14ರ ಅಧ್ಯಕ್ಷ ಸೊಹೈಲ್ ಖುರೇಷಿ ಹಾಗೂ ಮುಖಂಡ ಮೊಹಮ್ಮದ್ ಅಲಿಮ್ ಉಪಸ್ಥಿತರಿದ್ದರು.

# 'ಚಂದ್ರಿ' ಚಲನಚಿತ್ರದ ಚಿತ್ರೀಕರಣ ಮುಕ್ತಾಯ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಓ ಜೆ ಎಸ್ ಮೂವಿ ಮೇಕರ್ಸ್ ಅರ್ಪಿಸುವ "ಚಂದ್ರಿ" ಕನ್ನಡ ಚಲನಚಿತ್ರದ ಚಿತ್ರೀಕರಣ ಮುಕ್ತಾಯವಾಗಿ ಇದೀಗ ಪೋಸ್ಟ್ ಪ್ರೊಡಕ್ಷನ್ ಕಾರ್ಯ ಭರದಿಂದ ಸಾಗಿದೆ.**

ಡಾ. ಪ್ರವೀಣ್ ಚೌತಿ ಅವರ 'ಬಯಲು' ಕಥಾ ಸಂಕಲನದ ಕಥೆ ಆಧಾರಿಸಿ, ವಿಜಯನಗರ ಜಿಲ್ಲೆಯ ಕೊಟ್ಟೂರಿನ ಯುವ ಪ್ರತಿಭೆ ಎಸ್. ವೆಂಕಟೇಶ್ ಕೊಟ್ಟೂರ್ ಅವರ ನಿರ್ದೇಶನದ ಎರಡನೇ ಚಿತ್ರ ಇದಾಗಿದೆ. ಪ್ರಿಯಕರನ ಮೋಸಕ್ಕೆ ಬಲಿಯಾದ ಗ್ರಾಮೀಣ ಹೆಣ್ಣೊಬ್ಬಳು ಅಸಹಾಯಕಳಾಗಿ ಸಾವಿನ ಮನೆಯ ಕದ ಬಡಿಯುವಾಗ ಸೈದಪ್ಪ ಆಕೆಗೆ ಹೊಸ ಬದುಕು



ಕಟ್ಟಿಕೊಡುತ್ತಾನೆ. ತುತ್ತಿನಚೀಲ ತುಂಬಿಸಿಕೊಳ್ಳಲು ಎರಡು ಜೀವಗಳ ಹೋರಾಟವೇ ಇಲ್ಲಿದೆ.

ರಾಯಚೂರು ನಗರ, ಶಕ್ತಿನಗರ, ಕೊಟ್ಟೂರು, ಹೂವಿನ ಹಡಗಲಿ, ಮದಲಘಟ್ಟ ಮತ್ತು ಮರಳವಾಡಿಯ ಸುತ್ತಮುತ್ತ 18 ದಿನಗಳ ಕಾಲ ಚಿತ್ರೀಕರಣ ನಡೆಸಲಾಗಿದೆ. ಚಿತ್ರದ ಪ್ರಮುಖ ಪಾತ್ರದಲ್ಲಿ ಸೈದಪ್ಪನಾಗಿ ಕೆಜಿಎಫ್,ಪೈಲ್ವಾನ್, ಐರಾವತ, ರುಸ್ತುಂ, ಜಗ್ಗು ದಾದ, ಬಘೀರ, ಭೈರತಿ ರಣಗಲ್ ಮೊದಲಾದ ಚಿತ್ರಗಳಲ್ಲೂ ನಟಿಸಿ ಜನಪ್ರಿಯರಾದ ಹಿರಿಯ ಕಲಾವಿದ ರಾಮರಾವ್. ಜಿ ಅವರು ನಟಿಸಿದ್ದಾರೆ. ಚಂದ್ರಿ ಆಗಿ ವ್ಯೋಮಿ ಸಾಕೆಲ್ ಅಭಿನಯಿಸಿದ್ದಾರೆ. ಪ್ರಗತಿ ಪ್ರಭು, ಚಕ್ರವರ್ತಿ ದಾವಣಗೆರೆ, ಶಿವಮೊಗ್ಗ ರಾಮಣ್ಣ, ಉಗ್ರಂ ಸುರೇಶ್, ಶಶಿಧರ್, ಡಾ .ಪ್ರವೀಣ್ ಚೌತಿ, ಎಸ್ ಕೆ ಬಾಬು ಬೆಳಗೊಳ, ಸುರೇಶ್ ದೇವರಮನಿ, ಶಾರದಾ ಕಲ್ಲೂರ್, ಮಂಜೇಶ್ ತಾರಾಗಣದಲ್ಲಿದ್ದಾರೆ.

ಸಿಂಕ್ ಸೌಂಡ್ ನೊಂದಿಗೆ ಚಿತ್ರೀಕರಣ ನಡೆದಿರುವುದು ಈ ಚಿತ್ರದ ವಿಶೇಷ. ಚಿತ್ರದಲ್ಲಿ 2 ಹಾಡುಗಳಿದ್ದು ವೆಂಕಟೇಶ್ ಕೊಟ್ಟೂರು ಅವರೇ ಬರೆದಿದ್ದಾರೆ. ಛಾಯಾಗ್ರಹಣ ಸುನಿಲ್ ಕೆ ಆರ್ ಎಸ್, ಸಂಭಾಷಣೆ ಮಹಾಂತೇಶ್ ನವಲಕಾರ್, ಸಂಗೀತ ಎಸ್ ಕೆ ಸಹಿಶ್ಯಾಮ್, ಸಂಕಲನ ಮುತ್ತುರಾಜ್ ಟಿ, ಸಿಂಕ್ ಸೌಂಡ್ ಮೋಹನ್ – ಅಜಿತ್ ಯಳವಾಳ , 5.1 ಮಿಕ್ಸಿಂಗ್ ರಾಜ ಭಾಸ್ಕರ್, ಡಿ.ಐ ವರುಣ್ ಗೌಡ, ಕಲೆ ಬಸವರಾಜ್ ಆಚಾರ್, ಪಿ.ಆರ್.ಓ ಡಾ. ಪ್ರಭು ಗಂಜಿಹಾಳ, ಡಾ.ವೀರೇಶ್ ಹಂಡಿಗಿ, ಕಾರ್ಯಕಾರಿ ನಿರ್ಮಾಪಕರು ಎಚ್. ಶಶಿಧರ್–ಆರ್ಮುಗಂ, ಚಿತ್ರ ಕಥೆ, ನಿರ್ದೇಶನ ಎಸ್.ವೆಂಕಟೇಶ ಕೊಟ್ಟೂರು ಮಾಡಿದ್ದಾರೆ. ಶ್ರೀಮತಿ ಅನುಷಾ ಸುಪ್ರೀತ್ ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ.

–ಡಾ.ಪ್ರಭು ಗಂಜಿಹಾಳ

## ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ ತಾಲೂಕು ಉಪಾಧ್ಯಕ್ಷರಾಗಿ ಶಿವಪ್ಪ ಬಡಿಗೇರ ಮುಕ್ಕನಾಳ ನೇಮಕ

ನೈಜ್ಯ ದೆಸೆ ನ್ಯೂಸ್

**ಜಾಲಹಳ್ಳಿ: ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆಯ ದೇವದುರ್ಗ ತಾಲೂಕು ಘಟಕದ ಉಪಾಧ್ಯಕ್ಷರಾಗಿ ಶಿವಪ್ಪ ಬಡಿಗೇರ ಮುಕ್ಕನಾಳ ಅವರನ್ನು ನೇಮಕ ಮಾಡಲಾಗಿದೆ.**

ಸೆ.4ರಂದು ದೇವದುರ್ಗ ತಾಲೂಕಿನ ಜಾಲಹಳ್ಳಿ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆಯ ತಾಲೂಕು ಮತ್ತು ಜಿಲ್ಲಾ ಘಟಕದ ಪದಾಧಿಕಾ–ರಿಗಳ ಸಭೆ ನಡೆಯಿತು. ಈ ಸಭೆಯಲ್ಲಿ ಸಂಘಟನೆಯ ರಾಜ್ಯಾಧ್ಯಕ್ಷ ಶಾಂತಗೌಡ ಬಿ. ಪಾಟೀಲ್ ಚನ್ನಪಟ್ಟಣ ಹಾಗೂ ರಾಜ್ಯ ಉಪಾಧ್ಯಕ್ಷ ಲಕ್ಷ್ಮೀಕಾಂತ್ ಎ. ಪಾಟೀಲ್ ಮದ್ದರಕಿ ಅವರ ಆದೇಶದ ಮೇರೆಗೆ ಶಿವಪ್ಪ ಬಡಿಗೇರ ಮುಕ್ಕನಾಳ ಅವರನ್ನು ತಾಲೂಕು ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶ ಹೊರಡಿಸಲಾಯಿತು.



ಶಿವಪ್ಪ ಬಡಿಗೇರ ಅವರು ಈ ಹಿಂದೆ ಹಲವು ರೈತಪರ ಹೋರಾಟಗಳಲ್ಲಿ ಭಾಗವಹಿಸಿ, ರೈತರ ಸಮಸ್ಯೆಗಳು ಹಾಗೂ ಅಭಿವೃದ್ಧಿಗಾಗಿ ಹೋರಾಟ ನಡೆಸಿದ್ದಾರೆ. ರೈತರ ಹಕ್ಕು, ರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಸಂಘಟನೆಯೊಂದಿಗೆ ಸಕ್ರಿಯವಾಗಿ ಕಾರ್ಯನಿರ್ವಹಿಸುವ ಉದ್ದೇಶದಿಂದ ಅವ–ರಿಗೆ ಈ ಜವಾಬ್ದಾರಿ ನೀಡಲಾಗಿದೆ ಎಂದು ಸಂಘಟನೆಯ ಪದಾಧಿಕಾರಿಗಳು ತಿಳಿಸಿದರು.

ನೂತನವಾಗಿ ನೀಡಿರುವ ಹುದ್ದೆಯನ್ನು ಜವಾಬ್ದಾರಿಯಿಂದ ನಿರ್ವಹಿಸಿ, ತಾಲೂಕಿನ ರೈತರ ಸಮಸ್ಯೆಗಳನ್ನು ಗುರುತಿಸಿ, ನ್ಯಾಯಬದ್ಧ ಹಾಗೂ ಸಂವಿಧಾನಬದ್ಧ ರೀತಿಯಲ್ಲಿ ಹೋರಾಟ ನಡೆಸುವ ಮೂಲಕ ಸ್ವಾಭಿಮಾನಿ ರೈತರಿಗೆ ನ್ಯಾಯ ಒದಗಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಬೇಕು ಎಂದು ರಾಜ್ಯ ಉಪಾಧ್ಯಕ್ಷ ಲಕ್ಷ್ಮೀಕಾಂತ್ ಎ. ಪಾಟೀಲ್ ಮದ್ದರಕಿ ಸೂಚಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಇಂದ್ರಜೀತ್ ಯಾದವ್, ಜಿಲ್ಲಾ ಗೌರವ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ಹೋತಪೇಟ, ಜಿಲ್ಲಾ ಸಂಚಾಲಕ ಕ್ರಾಂತಿಕುಮಾರ್ ರಾಯಚೂರಕರ್, ತಾಲೂಕು ಅಧ್ಯಕ್ಷ ಮಹಾದೇವ್ ಯಾದವ್, ಸಂಘಟನಾ ಕಾರ್ಯದರ್ಶಿ ಚನ್ನಬಸವ ನಾಯಕ ಅರಕೇರಾ, ಸುರಪುರ ತಾಲೂಕು ಅಧ್ಯಕ್ಷ ಸೋಮನಾಥ ಪೂಜಾರಿ, ಸುರಪುರ ತಾಲೂಕು ಉಪಾಧ್ಯಕ್ಷ ದೇವರಾಜ್ ಎಸ್. ಬಡಿಗೇರ ಮುಕ್ಕನಾಳ, ಗ್ರಾಮ ಘಟಕ ಅಧ್ಯಕ್ಷ ದೇವಪ್ಪ ಬಂಡಿ, ನಾಗಣ್ಣ ಪೂಜಾರಿ, ಶಿವಪ್ಪ ತಳವಾರ, ಬೊಮ್ಮನಳ್ಳಿ ಗ್ರಾಮ ಘಟಕ ಅಧ್ಯಕ್ಷ ಶಂಕ್ರಗೌಡ, ಅಂಬರೇಶ ಮುಂಡರಗಿ, ಮುದುಕಪ್ಪ, ಕರಿಯಪ್ಪ ಸೇ–ರಿದಂತೆ ಹಲವು ರೈತರು ಉಪಸ್ಥಿತರಿದ್ದರು.

## ಕುಡಿಯುವ ನೀರಿನ ಸಮಸ್ಯೆಯನ್ನು ತುರ್ತಾಗಿ ಪರಿಹರಿಸುವ ರೈತ ಸಂಘ ಒತ್ತಾಯ

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ತಾಲೂಕಿನ ದೇವರಭೂಪೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಮಟ್‌ಮಡಿ ದೊಡ್ಡಿ ಸೇರಿ ವಿವಿಧ ಗ್ರಾಮಗಳು ಹಾಗೂ ಜನವಸತಿ ಪ್ರದೇಶಗಳಲ್ಲಿ ಕಳೆದ ತಿಂಗಳಿನಿಂದ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕ ಅಧ್ಯಕ್ಷ ದುರ್ಗಾ ಪ್ರಸಾದ್ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿಯನ್ನು ಸಲ್ಲಿಸಿದರು .**

ನಿಯಮಿತವಾಗಿ ಕುಡಿಯುವ ನೀರು ಪೂರೈಕೆಯಾಗುತ್ತಿದೆ ಸಾರ್ವಜನಿಕರು ದಿನನಿತ್ಯ ಪರದಾಡುವ ಪರಿಸ್ಥಿತಿ ಗ್ರಾಮಸ್ಥರಿಗೆ ಸಮರ್ಪಕ ಪ್ರಮಾಣದಲ್ಲಿ ಹಾಗೂ ನೀರಿನ ಕೊರತೆಯಿಂದ ಮಹಿಳೆಯರು, ಮಕ್ಕಳು ಹಾಗೂ ವೃದ್ಧರು ದೂರದ ಸ್ಥಳಗಳಿಗೆ ತೆರಳಿ ನೀರು ತರುವಂತಾಗಿದೆ. ಅಲ್ಲದೇ



ಕಳೆದ 8 ತಿಂಗಳುಗಳಿಂದ ಓವರ್ ಹೆಡ್ ಟ್ಯಾಂಕ್ ಹಾಗೂ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಸುಮಾರು 18 ನೀರಿನ ಗುಮ್ಮಿಗಳನ್ನು ಸ್ವಚ್ಛತೆ ಮಾಡಿರುವುದಿಲ್ಲ. ಅದು ಅಲ್ಲದೇ ಗುಮ್ಮಿಗಳ ಸರಿಯಾದ ನಿರ್ವಾಹಣೆ ಇಲ್ಲದೇ ಗುಮ್ಮಿಯ ನಳಗಳು ಇಲ್ಲದಂತಾಗಿದೆ.

ಒಂದು ವೇಳೆ ನೀರು ಗುಮ್ಮಿಗಳಿಗೆ ತುಂಬಿಸಿದರು ನೀರು ಪೋಲಾಗಿ ಹೋಗುವಂತಹ ಸ್ಥಿತಿ ಇದೆ. ಆದ್ದರಿಂದ ದೇವರಭೂಪೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ತುರ್ತಾಗಿ ಪರಿಶೀಲಿಸಿ, ಅಗತ್ಯವಿರುವ ಕಡೆಗಳಲ್ಲಿ ಕೊಳವೆಬಾವಿ ದುರಸ್ತಿ, ಪೈಪ್‌ಲೈನ್ ದುರಸ್ತಿ, ಮೋಟಾರ್‌ಗಳ ದುರಸ್ತಿ ಹಾಗೂ ಸಮರ್ಪಕ ನೀರು ಪೂರೈಕೆ ವ್ಯವಸ್ಥೆ ಕಲ್ಪಿಸಬೇಕು. ಸಮಸ್ಯೆ ಬಗೆಹರಿಯುವವರೆಗೆ ಅಗತ್ಯವಿರುವ ಪ್ರದೇಶಗಳಿಗೆ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಸುವ ವ್ಯವಸ್ಥೆ ಮಾಡಬೇಕು. 3 ದಿನಗಳಲ್ಲಿ ಸಮಸ್ಯೆ ಪರಿಹರಿಸದಿದ್ದರೆ ತಮ್ಮ ಕಛೇ–ರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ಮಾಡಲಾಗುವುದು ಎಂದು ಒತ್ತಾಯಿಸಿದರು . ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ಶಿವಜಂಗಮ , ಗ್ರಾ.ಘ.ಅಧ್ಯಕ್ಷ ಅಮರೇಶ , ಮಹ್ಮದ್ ಹೋ.ಉಪಾಧ್ಯಕ್ಷ ಮಹ್ಮದ್ ಖಾಜಾಸಾಬ , ಆದಪ್ಪ ಭೂಪೂರು , ಸುಕ್ಕಪ್ಪ ಸೇರಿದಂತೆ ಇತರರು ಇದ್ದರು.

# ಸಾರ್ವಜನಿಕ ಸಂಚಾರಕ್ಕೆ ತೊಡಕಾದ ಅಡ್ಡಗೋಡೆ: ತೆರವಿಗೆ ತಹಸೀಲ್ದಾರ್‌ಗೆ ಊಟಿ ಗ್ರಾಮಸ್ಥರ ಮನವಿ

ನೈಜ್ಯ ದೆಸೆ ನ್ಯೂಸ್

**ಅರಕೇರಿ: ತಾಲೂಕಿನ ಪಲಕನಮರಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಊಟಿ?ಯಲಗಟ್ಟಿ ಗ್ರಾಮಗಳನ್ನು ಸಂಪರ್ಕಿಸುವ ಪ್ರಮುಖ ರಸ್ತೆಯಲ್ಲಿರುವ ದುರ್ಗಾದೇವಿ ದೇವಸ್ಥಾನದ ಮುಂಭಾಗದಲ್ಲಿ ನಿರ್ಮಿಸಲಾಗುತ್ತಿರುವ ಅಡ್ಡಗೋಡೆಯನ್ನು ಕೂಡಲೇ ತೆರವುಗೊಳಿಸಿ, ಸಾರ್ವಜನಿಕರ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿ ಊಟಿ ಗ್ರಾಮಸ್ಥರು ಜಿಲ್ಲಾಧಿಕಾರಿ, ಅರಕೇರಿ ತಹಸೀಲ್ದಾರ್ ಹಾಗೂ ಲ್ಯಾಂಡ್ ಆರ್ಮಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.**

ಊಟಿ, ಯಲಗಟ್ಟಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಪ್ರತಿನಿತ್ಯ ಈ ರಸ್ತೆಯನ್ನು ಬಳಸುತ್ತಿದ್ದು, ಊಟಿ ಚಿನ್ನದ ಗಣಿ ಕಂಪನಿಯಲ್ಲಿ ಕೆಲಸ ಮಾಡುವ ಕಾರ್ಮಿಕರು ಸೇ–ರಿದಂತೆ ನೂರಾರು ಜನರು ಇದೇ ಮಾರ್ಗವನ್ನು ಅವಲಂಬಿಸಿದ್ದಾರೆ. ಪ್ರಮುಖ ಸಾರ್ವಜನಿಕ ರಸ್ತೆಗೆ ಅಡ್ಡಲಾಗಿ ಗೋಡೆ ನಿರ್ಮಿಸಲಾಗುತ್ತಿರುವುದರಿಂದ ವಾಹನ ಸವಾರರು ಹಾಗೂ ಸಾರ್ವಜನಿಕರಿಗೆ ತೀವ್ರ



ತೊಂದರೆಯಾಗುತ್ತಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಲ್ಯಾಂಡ್ ಆರ್ಮಿ ಇಲಾಖೆಯಿಂದ ಸುಮಾರು ?10 ಲಕ್ಷ ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎನ್ನಲಾಗಿದ್ದು, ಕಾಮಗಾರಿಯ ಉದ್ದೇಶ, ಮಂಜೂರಾದ ಅನುದಾನ, ಅಂದಾಜು ಪತ್ರ ಹಾಗೂ ಸ್ಥಳ ಆಯ್ಕೆ ಕುರಿತು ಅಧಿಕಾರಿಗಳು ಸ್ಪಷ್ಟ ಮಾಹಿತಿ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಕಾಮಗಾರಿಯಲ್ಲಿ ಗುಡ್ಡದ ಕಲ್ಲು, ಮಣ್ಣು ಹಾಗೂ ಕಾಲುವೆ?ಹಳ್ಳದ ಉಸುಕು ಬಳಸಲಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿದ್ದು, ಕಾಮಗಾ–ರಿಯ ಗುಣಮಟ್ಟದ ಬಗ್ಗೆ ಗ್ರಾಮಸ್ಥರು ಅನುಮಾನ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಹಿರಿಯ ತಾಂತ್ರಿಕ ಅಧಿಕಾರಿಗಳಿಂದ ಸ್ಥಳ ಪರಿಶೀಲನೆ ನಡೆಸಿ ಕಾಮಗಾ–ರಿಯ ಗುಣಮಟ್ಟವನ್ನು ಪರಿಶೀಲಿಸಬೇಕು ಹಾಗೂ ಪರಿಶೀಲನೆ ಪೂರ್ಣಗೊಳ್ಳುವವರೆಗೆ ಕಾಮಗಾರಿ ಸ್ಥಗಿ–ತಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

ಅಡ್ಡಗೋಡೆಯ ಪಕ್ಕದಲ್ಲಿ ತಾತ್ಕಾಲಿಕವಾಗಿ ರಸ್ತೆ ನಿರ್ಮಿಸಲಾಗಿದ್ದರೂ ವಾಹನ ಸಂಚಾರಕ್ಕೆ ಸಮರ್ಪಕ ವ್ಯವಸ್ಥೆ ಇಲ್ಲದ ಕಾರಣ ವಾಹನ ಸವಾರರು ನಿಯಂತ್ರಣ ತಪ್ಪಿ ಬೀಳುವ ಘಟನೆಗಳು ನಡೆಯುತ್ತಿವೆ. ಮುಂದಿನ ದಿನಗಳಲ್ಲಿ ಅಪಘಾತ ಸಂಭವಿಸುವ ಮುನ್ನ ಅಧಿಕಾರಿಗಳು ತಕ್ಷಣ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಸೆ.8ರಂದು ದುರ್ಗಾದೇವಿ ದೇವಸ್ಥಾನದ ಜಾತ್ರೆ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುವ ನಿರೀಕ್ಷೆಯಿದೆ. ಈ ಸಂದರ್ಭದಲ್ಲಿ ಸಂಚಾರದ ಸಮಸ್ಯೆ ಮತ್ತಷ್ಟು ಉಲ್ಬಣವಾಗುವ ಸಾಧ್ಯತೆ ಇರುವುದರಿಂದ ಜಾತ್ರೆಗೂ ಮುನ್ನವೇ ಅಡ್ಡಗೋಡೆಯನ್ನು ತೆರವುಗೊಳಿಸಿ ರಸ್ತೆಯನ್ನು ಸಾರ್ವಜನಿಕ ಸಂಚಾರಕ್ಕೆ ಮುಕ್ತಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಕಾಮಗಾರಿ ನಿಯಮಾನುಸಾರ ನಡೆಯುತ್ತಿದೆಯೇ ಎಂಬುದನ್ನು ಪರಿಶೀಲಿಸಿ, ಸಾರ್ವಜನಿಕ ಸಂಚಾರಕ್ಕೆ ಅಡ್ಡಿಯಾಗುತ್ತಿದ್ದರೆ ಕಾಮಗಾರಿಯನ್ನು ಸ್ಥಗಿ–ತಗೊಳಿಸಿ ಅಡ್ಡಗೋಡೆಯನ್ನು ತೆರವುಗೊಳಿಸಬೇಕು ಎಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಶಿವನಗೌಡ ನಾಯಕ ಊಟಿ, ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಕರಿಯಪ್ಪ, ಸೋಮನಾಥ ಸುಣದಕಲ್, ದುರ್ಗಣ ಅಂಬಿಗೇರ, ಸೋಮನಾಥ, ಶಿವರಾಜ, ಬುಡ್ಡಯ್ಯ, ಹನುಮಂತ, ರಂಗನಾಥ, ಚನ್ನಬಸವ, ಗುಂಡಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ನೇಮಕಾತಿ ಪ್ರಕಟಣೆ

**IRCTC ನೇಮಕಾತಿ 2026 'ಕಂಟ್ರೋಲ್ ಆಫೀಸ್ ಕನ್ಸಲ್ಟೆಂಟ್' ಹುದ್ದೆಗೆ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಸೆಪ್ಟೆಂಬರ್ 4, 2026**

IRCTC ನೇಮಕಾತಿ 2026: 'ಕಂಟ್ರೋಲ್ ಆಫೀಸ್ ಕನ್ಸಲ್ಟೆಂಟ್' (Consultant for Control Office) ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಇಂಡಿಯನ್ ರೈಲ್ವೆ ಕ್ಯಾಟ-ರಿಂಗ್ ಅಂಡ್ ಟೂರಿಸಂ ಕಾರ್ಪೊರೇಷನ್ (IRCTC) ತನ್ನ ಸೆಪ್ಟೆಂಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಈ ಹುದ್ದೆಗೆ ಅರ್ಜಿಗಳನ್ನು ಕೋರಿದೆ. ಚೆನ್ನೈ (ತಮಿಳುನಾಡು) ಪ್ರದೇಶದಲ್ಲಿ ಉದ್ಯೋಗವನ್ನು ಹುಡುಕುತ್ತಿರುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 17-ಸೆಪ್ಟೆಂಬರ್-2026 ರೊಳಗೆ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: irctc.com

# ಶಿಕ್ಷಕರ ದಿನಾಚರಣೆ:

## ನವಸಮಾಜದ ಶಿಲ್ಪಿಗಳಿಗೆ ಗೌರವ ಸಮರ್ಪಣೆ

ನೈಜ್ಯ ದೆಸೆ ನ್ಯೂಸ್

ಜಿಲಾನಸಾಬ್ ಬಡಿಗೇರ್

"ಶಿಕ್ಷಕರು ಕೇವಲ ಅಕ್ಷರ ಕಲಿಸುವವರಲ್ಲ, ಬದಲಿಗೆ ವಿದ್ಯಾರ್ಥಿಯ ಸುಪ್ತ ಚೇತನವನ್ನು ಜಾಗೃತಗೊಳಿಸಿ, ಅವರನ್ನು ದೇಶದ ಜವಾಬ್ದಾರಿಯುತ ಪ್ರಜೆಯನ್ನಾಗಿ ರೂಪಿಸುವ ನಿಜವಾದ ಸಮಾಜ ಶಿಲ್ಪಿಗಳು" ಎಂದು ಹೇಳಲಾಗುತ್ತದೆ. ನಮ್ಮ ದೇಶದಲ್ಲಿ ಪ್ರತಿ ವರ್ಷ ಸೆಪ್ಟೆಂಬರ್ 5 ರಂದು ಜ್ಞಾನದ ದೀವಿಗೆಯನ್ನು ಬೆಳಗುವ ಇಂತಹ ಮಹಾನ್ ಚೇತನಗಳಿಗೆ ಕೃತಜ್ಞತೆ ಸಲ್ಲಿಸುವ ಸಲುವಾಗಿ 'ಶಿಕ್ಷಕರ ದಿನಾಚರಣೆ'ಯನ್ನು ಅತ್ಯಂತ ಸಡಗರ ಮತ್ತು ಗೌರವದಿಂದ ಆಚರಿಸಲಾಗುತ್ತದೆ.

ಭಾರತದ ದ್ವಿತೀಯ ರಾಷ್ಟ್ರಪತಿ, ವಿಶ್ವಪ್ರಸಿದ್ಧ ತತ್ವಜ್ಞಾನಿ ಹಾಗೂ ಶ್ರೇಷ್ಠ ಶಿಕ್ಷಣ ತಜ್ಞರಾಗಿದ್ದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ನೆನಪಿಗಾಗಿ ಈ ದಿನವನ್ನು ದೇಶಾದ್ಯಂತ ಶಿಕ್ಷಕರ ದಿನವನ್ನಾಗಿ ಆಚರಿಸುವ ಸುಂದರ ಸಂಪ್ರದಾಯ ನಡೆದುಬಂದಿದೆ.

**ಆಚರಣೆಯ ಐತಿಹಾಸಿಕ ಹಿನ್ನೆಲೆ :**

ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆ ಮತ್ತು ಅವರಲ್ಲಿದ್ದ ಆದರ್ಶಗಳು ಪ್ರತಿಯೊಬ್ಬರಿಗೂ ಮಾದರಿ. 1962ರಲ್ಲಿ ಅವರು ಭಾರತದ ರಾಷ್ಟ್ರಪತಿಯಾಗಿ ಅಧಿಕಾರ ವಹಿಸಿಕೊಂಡಾಗ, ಅವರ ವಿದ್ಯಾರ್ಥಿಗಳು ಮತ್ತು ಅಭಿಮಾನಿಗಳು ಅವರ ಜನ್ಮದಿನವನ್ನು ವಿಜೃಂಭಣೆಯಿಂದ ಆಚರಿಸಲು ಅನುಮತಿ ಕೋರಿದರು. ಆಗ ರಾಧಾಕೃಷ್ಣನ್ ಅವರು ನಯವಾಗಿಯೇ ನಿರಾಕರಿಸಿ, "ನನ್ನ ಜನ್ಮದಿನವನ್ನು ಪ್ರತ್ಯೇಕವಾಗಿ ಆಚರಿಸುವ ಬದಲು, ದೇಶದ ಎಲ್ಲಾ ಶಿಕ್ಷಕರ ಗೌರವಾರ್ಥವಾಗಿ 'ಶಿಕ್ಷಕರ ದಿನ' ಎಂದು ಆಚರಿಸಿದರೆ ನನಗೆ ನಿಜವಾದ ಹೆಮ್ಮೆ ಮತ್ತು ಸಂತೋಷವಾಗುತ್ತದೆ" ಎಂದರು. ಅವರ ಈ ಉದಾತ್ತ ಆಶಯದಂತೆ ಅಂದಿನಿಂದ ಪ್ರತಿ ವರ್ಷ ಸೆಪ್ಟೆಂಬರ್ 5 ರಂದು ದೇಶಾದ್ಯಂತ ರಾಷ್ಟ್ರೀಯ ಶಿಕ್ಷಕರ ದಿನವನ್ನು ಆಚರಿಸಲಾಗುತ್ತಿದೆ. ಭಾರತೀಯ ಸಂಸ್ಕೃತಿಯಲ್ಲಿ ಗುರುವಿನ ಸ್ಥಾನನಮ್ಮ ಸನಾತನ ಸಂಸ್ಕೃತಿಯಲ್ಲಿ ಗುರುವಿಗೆ ಅತ್ಯುನ್ನತ ಹಾಗೂ ಪವಿತ್ರವಾದ ಸ್ಥಾನವನ್ನು ನೀಡಲಾಗಿದೆ.


"ಗುರು ಬ್ರಹ್ಮ ಗುರು ವಿಷ್ಣು ಗುರು ದೇವೋ ಮಹೇಶ್ವರಃ ।ಗುರು ಸಾಕ್ಷಾತ್ ಪರಬ್ರಹ್ಮ ತಸ್ಮೈ ಶ್ರೀ ಗುರವೇ ನಮಃ"

ಎಂಬ ಶ್ಲೋಕದಂತೆ ಗುರುವನ್ನು ತ್ರಿಮೂರ್ತಿಗಳಿಗೆ ಹೋಲಿಸಲಾಗಿದೆ. ಕತ್ತಲೆಯಿಂದ ಬೆಳಕಿನೆಡೆಗೆ ನಡೆಸುವವರೇ ಗುರು. ಕೇವಲ ಪಠ್ಯಪುಸ್ತಕದ ಜ್ಞಾನವನ್ನು ಉರು ಹೊಡೆಸುವುದಷ್ಟೇ ಶಿಕ್ಷಕರ ಕೆಲಸವಲ್ಲ. ಮಗುವಿನಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ, ಅದಕ್ಕೆ ಸೂಕ್ತ ವೇದಿಕೆ ಕಲ್ಪಿಸಿ, ಸರಿ-ತಪ್ಪುಗಳ ವಿವೇಚನೆ ನೀಡಿ, ಶಿಸ್ತು ಮತ್ತು ನೈತಿಕ ಮೌಲ್ಯಗಳನ್ನು ಬಿತ್ತುವ ಮಹತ್ತರ ಜವಾಬ್ದಾರಿ ಶಿಕ್ಷಕರ ಮೇಲಿರುತ್ತದೆ. ತಂದೆ-ತಾಯಿ ಜನ್ಮ ನೀಡಿದರೆ, ಶಿಕ್ಷಕರು ಆ ಜನ್ಮಕ್ಕೆ ಸಾರ್ಥಕತೆಯನ್ನು ತಂದುಕೊಡುತ್ತಾರೆ.ಶಾಲಾ-ಕಾಲೇಜುಗಳಲ್ಲಿ ಸಂಭ್ರಮದ ವಾತಾವರಣ ಶಿಕ್ಷಕರ ದಿನಾಚರಣೆಯ ದಿನದಂದು ದೇಶದ ಪ್ರತಿಯೊಂದು ಶಾಲಾ-ಕಾಲೇಜುಗಳಲ್ಲಿಯೂ ಹಬ್ಬದ ವಾತಾವರಣವಿರುತ್ತದೆ. ವಿದ್ಯಾರ್ಥಿಗಳು ತಮ್ಮ ನೆಚ್ಚಿನ ಶಿಕ್ಷಕರಿಗೆ ಶುಭಾಶಯ ಪತ್ರಗಳನ್ನು ನೀಡಿ, ಹೂಗುಚ್ಛ ಹಾಗೂ ಸಣ್ಣ ಉಡು-ಗೊರೆಗಳನ್ನು ಕೊಟ್ಟು ಪಾದನಮಸ್ಕಾರ ಮಾಡಿ ಆಶೀರ್ವಾದ ಪಡೆಯುತ್ತಾರೆ.

ಈ ದಿನದಂದು ಶಾಲಾ ಆಡಳಿತ ಮಂಡಳಿ ಹಾಗೂ ವಿದ್ಯಾರ್ಥಿಗಳು ವತಿಯಿಂದ ಶಿಕ್ಷಕರಿಗಾಗಿ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮಗಳು, ನಾಟಕ, ಸಂಗೀತ, ಹಾಸ್ಯ ಪ್ರಹಸನ ಮತ್ತು ವಿವಿಧ ಮನೋರಂಜನಾ ಆಟೋಟ ಸ್ಪರ್ಧೆಗಳನ್ನು ಆಯೋಜನೆ ಮಾಡುತ್ತಾರೆ.

ಕೆಲವು ಶಾಲೆಗಳಲ್ಲಿ ಹಿರಿಯ ವಿದ್ಯಾರ್ಥಿಗಳೇ ಶಿಕ್ಷಕರ ವೇಷ ಧರಿಸಿ, ತರಗತಿಗಳನ್ನು ತೆಗೆದುಕೊಳ್ಳುವ ಮೂಲಕ ಶಿಕ್ಷಕರ ಜವಾಬ್ದಾರಿಯ ಅನುಭವವನ್ನು ಪಡೆದುಕೊಳ್ಳುತ್ತಾರೆ. ಇದು ವಿದ್ಯಾರ್ಥಿ ಮತ್ತು ಶಿಕ್ಷಕರ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ. ಪ್ರಸ್ತುತ ದಿನಗಳಲ್ಲಿ ಶಿಕ್ಷಕರ ಮುಂದಿರುವ ಸವಾಲುಗಳು ಆಧುನಿಕ ತಂತ್ರಜ್ಞಾನ ಮತ್ತು ಅಂತರ್ಜಾಲದ ಇಂದಿನ ಯುಗದಲ್ಲಿ ಶಿಕ್ಷಣ ಕ್ಷೇತ್ರವು ಸಾಕಷ್ಟು ಬದಲಾಗಿದೆ. ಇಂದಿನ ಡಿಜಿಟಲ್ ಜಗತ್ತಿನಲ್ಲಿ ಮಾಹಿತಿ ಬೆರಳ ತುದಿಯಲ್ಲಿ ಸಿಗುತ್ತಿದ್ದರೂ, ಆ ಮಾಹಿತಿಯನ್ನು ಜ್ಞಾನವನ್ನಾಗಿ ಪರಿವರ್ತಿಸುವ ಮತ್ತು ವಿದ್ಯಾರ್ಥಿಗಳಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುವ ಗುರುತರ ಜವಾಬ್ದಾರಿ ಇಂದಿಗೂ ಶಿಕ್ಷಕರ ಮೇಲೆಯೇ ಇದೆ. ಕೋವಿಡ್ ತರಹದ ಕಠಿಣ ಪರಿಸ್ಥಿತಿಗಳಲ್ಲೂ ಆನ್‌ಲೈನ್ ತರಗತಿಗಳ ಮೂಲಕ ಶಿಕ್ಷಣ ನಿರಂತರವಾಗಿ ಸಾಗುವಂತೆ ಮಾಡಿದ ಶಿಕ್ಷಕರ ಶ್ರಮ ಅನನ್ಯವಾದುದು.

**ದೇಶದ ಪ್ರಗತಿಯು ಅ ದೇಶದ ತರಗತಿ ಕೋಣೆಗಳಲ್ಲಿ ನಿರ್ಮಾಣವಾಗುತ್ತದೆ.** ಅಂತಹ ಭವಿಷ್ಯವನ್ನು ಕರಾರುವಾಕ್ಕಾಗಿ ಕಾರ್ಯವನ್ನು ಶಿಕ್ಷಕರು ಮಾಡುತ್ತಿದ್ದಾರೆ. ಆದ್ದರಿಂದ ಶಿಕ್ಷಕರ ದಿನಾಚರಣೆಯು ಕೇವಲ ಒಂದು ದಿನದ ಆಚ-ರಣೆ ಅಥವಾ ಭಾಷಣಕ್ಕೆ ಸೀಮಿತವಾಗಬಾರದು. ನಮಗೆ ಬದುಕಿನ ಹಾದಿ ತೋರಿಸಿದ ಗುರುಗಳನ್ನು ಜೀವಿತಾವಧಿಯವರೆಗೆ ಗೌರವಿಸುವುದು ಮತ್ತು ಅವರು ತೋರಿದ ಸನ್ಮಾರ್ಗದಲ್ಲಿ ನಡೆಯುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಆದ್ಯ ಕರ್ತವ್ಯವಾಗಿದೆ. ನಿಸ್ವಾರ್ಥ ಸೇವೆಯ ಮೂಲಕ ನವಸಮಾಜದ ನಿರ್ಮಾಣಕ್ಕೆ ಶ್ರಮಿಸುತ್ತಿರುವ ನಾಡಿನ ಸಮಸ್ತ ಶಿಕ್ಷಕ ವೃಂದಕ್ಕೆ ನಮ್ಮ ಕೋಟಿ ಕೋಟಿ ಪ್ರಣಾಮಗಳು.




## ಕಂಪ್ಲಿಯ ಸ್ವಾಮಿ ವಿವೇಕಾನಂದ ಶಾಲೆಯಲ್ಲಿ ಸಡಗರದ ಶ್ರೀ ಕೃಷ್ಣ ಜನ್ಮಾಷ್ಟಮಿ ಆಚರಣೆ

ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಇಲ್ಲಿನ ಕೋಟೆಯ ಶ್ರೀ ಸ್ವಾಮಿ ವಿವೇಕಾನಂದ ಶಾಲೆಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಹಬ್ಬವನ್ನು ಅತ್ಯಂತ ಸಡಗರ, ಸಂಭ್ರಮ ಹಾಗೂ ಸಾಂಪ್ರದಾಯಿಕ ಶ್ರದ್ಧಾಭಕ್ತಿಗಳಿಂದ ಆಚ-ರಿಸಲಾಯಿತು. ಕಾರ್ಯಕ್ರಮದ ನೇತೃತ್ವವನ್ನು ವಹಿಸಿ ಮಾತನಾಡಿದ ಶಾಲೆಯ ಮುಖ್ಯಗುರುಗಳಾದ ಬಡಿಗೇರ್ ಜಿಲಾನಸಾಬ್ ಅವರು, "ಭಾರತೀಯ ಸಂಸ್ಕೃತಿಯಲ್ಲಿ ಹಬ್ಬಗಳ ಆಚ-ರಣೆಯು ಸೌಹಾರ್ದತೆ ಮತ್ತು ನೈತಿಕ ಮೌಲ್ಯಗಳನ್ನು ಬೆಳೆಸುತ್ತದೆ.



ವಿದ್ಯಾರ್ಥಿ ದೆಸೆಯಲ್ಲೇ ಮಕ್ಕಳಿಗೆ ಇಂತಹ ಸಾಂಸ್ಕೃತಿಕ ಹಿನ್ನೆಲೆಯ ಪರಿಚಯ ಮಾಡಿಸುವುದು ಇಂದಿನ ಅಗತ್ಯವಾಗಿದೆ," ಎಂದು ತಿಳಿಸಿದರು. ಆಕರ್ಷಿಸಿದ ರಾಧೆ-ಕೃಷ್ಣರ ವೇಷ ಭೂಷಣ : ಹಬ್ಬದ ಅಂಗವಾಗಿ ಶಾಲೆಯ ಪುಟ್ಟ ಮಕ್ಕಳು ಶ್ರೀಕೃಷ್ಣ ಮತ್ತು ರಾಧೆಯರ ಆಕರ್ಷಕ ವೇಷಭೂಷಣಗಳನ್ನು ಧರಿಸಿ ಬಂದು ಎಲ್ಲರ ಗಮನ ಸೆಳೆದರು. ಮಕ್ಕಳ ಮುದ್ದಾದ ನೃತ್ಯ ಮತ್ತು ಸಡಗರ ಹಬ್ಬದ ಕಳೆಯನ್ನು ಹೆಚ್ಚಿಸಿತ್ತು. ಕಾರ್ಯಕ್ರಮದಲ್ಲಿ ಶಿಕ್ಷಕಿಯರಾದ ಕೆ.ಶ್ವೇತಾ, ಜೆ.ಅಕ್ಷತಾ, ಕೊಲ್ಕರ್ ಉಮಾ, ವರ್ಷಾ ಮಜುಂದಾರ್, ಮಠದ ಸುನೀತಾ, ಡಿ.ಉಮಾ, ಖಜಾಬನಿ ಹಾಗೂ ಸಹಾಯಕಿ ಶರ್ಮಾಸಬಿ ಸೇರಿದಂತೆ ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರು ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ತುಂಗಭದ್ರಾ ಒಡಲಿಗೆ ಮರಳು ಗಣಿಗಾರಿಕೆ ಕಂಟಕ, ಗಣಿಗಾರಿಕೆಗೆ ತೀವ್ರ ಆಕ್ಷೇಪಣೆ

ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಸಮೀಪದ ಮಣ್ಣೂರು ಮತ್ತು ಎಂ. ಸೂಗೂರು ಗ್ರಾಮಗಳ ತುಂಗಭದ್ರಾ ನದಿ ಪಾತ್ರದಲ್ಲಿ ಪ್ರಸ್ತಾಪಿಸಲಾಗಿರುವ 65 ಎಕರೆ ಮರಳು ಗಣಿಗಾರಿಕೆ ಬ್ಲಾಕ್‌ಗಳಿಗೆ ಪರಿಸರ ಅನುಮತಿ ನೀಡಬಾರದು ಎಂದು ಸಾರ್ವಜನಿಕ ಆಲಿಕೆ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಿಗೆ ಲಿಖಿತ ಆಕ್ಷೇಪಣೆ ಸಲ್ಲಿಸಲಾಯಿತು.




ಡಾ. ಭೀಮರಾವ್ ಅಂಬೇಡ್ಕರ್ ಚಾರಿಟೇಬಲ್ ಸೇವಾ ಟ್ರಸ್ಟ್ (ರಿ) ಸಂಸ್ಥಾಪಕ ಅಧ್ಯಕ್ಷ ಹಾಗೂ ಸಾಮಾಜಿ-ಕ ಕಾರ್ಯಕರ್ತ ರವಿ ಮಣ್ಣೂರು ಅವರು ಅಪಾರ ಜಿಲ್ಲಾಧಿಕಾರಿ ಮೊಹಮ್ಮದ್ ಜುಬೇರ್ ಅವರಿಗೆ ಅನುಮತಿ ನೀಡಬಾರದು ಎಂದು ಲಿಖಿತ ಆಕ್ಷೇಪಣೆ ಸಲ್ಲಿಸಿದರು. "ಗಣಿಗಾರಿಕೆಯಿಂದ ಕುಡಿಯುವ ನೀರಿನ ಬಾವಿಗಳು ಬತ್ತಲಿವೆ ಮತ್ತು ನೂರಾರು ಲಾರಿಗಳ ಸಂಚಾರದಿಂದ ವಿಪರೀತ ವಾಯು ಮಾಲಿನ್ಯ ಉಂಟಾಗಿ ಸಾರ್ವಜನಿಕರ ಆರೋಗ್ಯ ಹದಗೆಡಲಿದೆ. ಇದು ಪರಿಸರ ಹಾಗೂ ಪೆಸಾ (PESA) ಕಾಯ್ದೆಗಳ ಉಲ್ಲಂಘನೆಯಾಗಿದೆ" ಎಂದು ತಿಳಿಸಿದರು. ಮನವಿ ಸ್ವೀಕರಿಸಿದ ಅಧಿಕಾರಿಗಳು ಇದನ್ನು ಕಡತಕ್ಕೆ ಸೇರಿಸುವುದಾಗಿ ಭರವಸೆ ನೀಡಿದರು.

## ಕೃಷ್ಣಗಿರಿ ಕಾಲೋನಿಯಲ್ಲಿ ಕಂಗೊಳಿಸಿದ ಬಾಲಕೃಷ್ಣರ ವೇಷ

ನೈಜ್ಯ ದೆಸೆ ನ್ಯೂಸ್



ಕುಷ್ಟಗಿ: ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಪಟ್ಟಣದ ಕೃಷ್ಣಗಿರಿ ಕಾಲೋನಿಯಲ್ಲಿ ಶುಕ್ರವಾರ ಪುಟ್ಟ ಬಾಲಕರು ಕೃಷ್ಣನ ವೇಷ ಧರಿಸಿ ಸಂಭ್ರಮಿಸಿದರು. ಕಿರೀಟ, ಕೊಳಲು ಹಾಗೂ ಆಕರ್ಷಕ ವೇಷಭೂಷಣ ಧರಿಸಿದ ಬಾಲಕರು ಮನೆಗಳ ಮುಂದೆ ಕಾಣಿಸಿಕೊಂಡು ಹಬ್ಬದ ಸಂಭ್ರಮವನ್ನು ಹೆಚ್ಚಿಸಿದರು. ಪುಟ್ಟ ಕೃಷ್ಣರ ಮುದ್ದಾದ ವೇಷಭೂಷಣ ಹಾಗೂ ನಗುವಿನ ಮುಖಚಹರೆ ನಿವಾಸಿಗಳ ಗಮನ ಸೆಳೆಯಿತು. ಮಕ್ಕಳ ಕೃಷ್ಣ ವೇಷವು ಕಾಲೋನಿಯಲ್ಲಿ ಹಬ್ಬದ ವಾತಾವರಣ ನಿರ್ಮಿಸಿತು.

## ಶ್ರೀ ಬಸವೇಶ್ವರ ಸಂಯುಕ್ತ ಪ್ರೌಢಶಾಲೆಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ – ಶಿಕ್ಷಕರ ದಿನಾಚರಣೆ ಶ್ರದ್ಧಾ-ಉತ್ಸಾಹದಿಂದ ಆಚರಣೆ

ನೈಜ್ಯ ದೆಸೆ ನ್ಯೂಸ್

ಬಳಗಾನೂರು: ಸಮೀಪದ ಬಳಗಾನೂರು ಪಟ್ಟಣದ ಶ್ರೀ ಬಸವೇಶ್ವರ ಸಂಯುಕ್ತ ಪ್ರೌಢಶಾಲೆಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಹಾಗೂ ಶಿಕ್ಷಕರ ದಿನಾಚರಣೆಯ ಅಂಗವಾಗಿ ವಿಶೇಷ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಾರ್ಯಕ್ರಮದ ಆರಂಭದಲ್ಲಿ ಶ್ರೀ ಕೃಷ್ಣನ ಸುಂದರ ಭಾವಚಿತ್ರಕ್ಕೆ ಶಾಲೆಯ ಮುಖ್ಯ ಗುರುಗಳು, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿನಿಯರು ಪುಷ್ಪಾರ್ಚನೆ ಮಾಡಿ, ಭಕ್ತಿಪೂರ್ವಕವಾಗಿ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಶಾಲೆಯ ಮುಖ್ಯ ಗುರುಗಳಾದ ಅಮರನಾಥ ಹಳ್ಳೂರ್ ರವರು, "ಶ್ರೀ ಕೃಷ್ಣನ ಆದರ್ಶಗಳು, ಭಗವದ್ಗೀತೆಯ ಬೋಧನೆಗಳು ಮತ್ತು ಆತನ ಜೀವನದ ನಿಯಮಗಳು ನಮ್ಮೆಲ್ಲರ ಜೀವನಕ್ಕೆ ಅತ್ಯುತ್ತಮ ಮಾದರಿಯಾಗಿವೆ. ಕಷ್ಟಪಟ್ಟು ಫಲದ ನಿರೀಕ್ಷೆಯಿಲ್ಲದೆ ಕರ್ತವ್ಯ ಮಾಡುವುದನ್ನು ಕೃಷ್ಣನ ಜೀವನ ನಮಗೆ ಕಲಿಸುತ್ತದೆ.

ವಿದ್ಯಾರ್ಥಿಗಳು ಬಾಲ್ಯದಿಂದಲೇ ಉತ್ತಮ ಸಂಸ್ಕಾರ, ಸಚ್ಚಾರಿತ್ರ್ಯ ಹಾಗೂ ಕರ್ತವ್ಯ ನಿಷ್ಠೆಯನ್ನು ಮೈಗೂಡಿಸಿಕೊಂಡು ದೇಶದ ಸತ್ಪ್ರಜೆಗಳಾಗಬೇಕು" ಎಂದು ಮಾರ್ಗದರ್ಶನ ನೀಡಿದರು.ಇದೇ ಸಂದರ್ಭದಲ್ಲಿ ಶಿಕ್ಷಕರ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿಗಳ ಜ್ಞಾನಾರ್ಜನೆ ಮತ್ತು ಬೌದ್ಧಿಕ ವಿಕಾಸವನ್ನು ಉತ್ತೇಜಿಸಲು ಶಾಲೆಯಲ್ಲಿ ವಿಶೇಷ ರಸಪ್ರಶ್ನೆ (ಕ್ವಿಜ್) ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ಸ್ಪರ್ಧೆಯಲ್ಲಿ ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಅತ್ಯಂತ ಉತ್ಸಾಹ ಮತ್ತು ಸ್ಪರ್ಧಾತ್ಮಕ ಮನೋಭಾವದಿಂದ ಭಾಗವಹಿಸಿದ್ದರು.

ರಸಪ್ರಶ್ನೆ ಸ್ಪರ್ಧೆಯಲ್ಲಿ ಅತ್ಯುತ್ತಮ ಸಾಧನೆ ತೋರಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದುಕೊಂಡ ವಿಜೇತ ತಂಡಗಳಿಗೆ ಶಾಲೆಯ ಮುಖ್ಯ ಗುರುಗಳಾದ ಅಮರನಾಥ ಹಳ್ಳೂರ್ ಹಾಗೂ ಉಪಸ್ಥಿತ-ರಿದ್ದ ಶಿಕ್ಷಕ ವೃಂದದವರು ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಿಸಿ ಶುಭ ಹಾರೈಸಿದರು. ಕಾರ್ಯಕ್ರಮದಲ್ಲಿ ಶಾಲೆಯ ಸಹ ಶಿಕ್ಷಕರು, ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉಪಸ್ಥಿತರಿದ್ದು, ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು.



## ಹೋಲಿ ಫ್ಯಾಮಿಲಿ ಚರ್ಚಿನಲ್ಲಿ ಕನ್ಯಾ ಮರಿಯಮ್ಮನವರ ಜನನ ಮಹೋತ್ಸವದ ಸಿದ್ಧತಾ ಪ್ರಾರ್ಥನೆ ಹಾಗೂ ಧ್ವಜಾರೋಹಣ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಪವಿತ್ರ 'ಹೋಲಿ ಫ್ಯಾಮಿಲಿ' (Holy Family) ಚರ್ಚಿನಲ್ಲಿ ದೇವಮಾತೆ ಕನ್ಯಾ ಮರಿಯಮ್ಮನವರ ಹುಟ್ಟುಹಬ್ಬದ (ಜನನ ಮಹೋತ್ಸವ) ಅಂಗವಾಗಿ ಧ್ವಜಾರೋಹಣ ಹಾಗೂ ಸಿದ್ಧತಾ ಪ್ರಾರ್ಥನೆಗಳು ಭಕ್ತಿಭಾವ ಮತ್ತು ವಿಜೃಂಭಣೆಯಿಂದ ಪ್ರಾರಂಭಗೊಂಡವು.**

ಚರ್ಚಿನ ಆವರಣದಲ್ಲಿ ಆಯೋಜಿಸಲಾಗಿದ್ದ ಈ ಪವಿತ್ರ ಧಾರ್ಮಿಕ ಕಾರ್ಯಕ್ರಮದಲ್ಲಿ ಧರ್ಮಗುರುಗಳಾದ ಫಾದರ್ ರೆವರೆಂಡ್ ಜ್ಞಾನಪ್ರಕಾಶ್ ಹಾಗೂ ಫಾದರ್ ಮರಿಸ್ವಾಮಿ ಅವರ ದಿವ್ಯ ಸಾನ್ನಿಧ್ಯದಲ್ಲಿ ಚರ್ಚಿನ ಧ್ವಜಾರೋಹಣ ನೆರವೇರಿಸಲಾಯಿತು. ಧ್ವಜಾರೋಹಣದ ನಂತರ ಭಕ್ತಿಪೂರ್ವಕ ಗಾಯನಗಳೊಂದಿಗೆ ಆಡಂಬರದ ದಿವ್ಯ ಬಲಿಪೂಜೆ ನೆರವೇರಿಸಿ, ದೇಶದಲ್ಲಿ ಶಾಂತಿ, ಸೌಹಾರ್ದತೆ, ಆರೋಗ್ಯ ಹಾಗೂ ಸಮಾಜದ ಅಭಿವೃದ್ಧಿಗಾಗಿ ದೇವಮಾತೆಯ ವಿಶೇಷ ಕೃಪೆ ಮತ್ತು ಆಶೀರ್ವಾದ ಕೋರಿ ಪ್ರಾರ್ಥಿಸಲಾಯಿತು. ಸೆಪ್ಟೆಂಬರ್ 8 ರಂದು ನಡೆಯಲಿರುವ ಮ-ರಿಯಮ್ಮನವರ ಜನನ ಮಹೋತ್ಸವದ (ಮೊಂತಿ ಫೆಸ್ಟ್) ಹಿನ್ನೆಲೆಯಲ್ಲಿ ಇಂದಿನಿಂದ 3 ದಿನಗಳ ಕಾಲ ನಿರಂತರವಾಗಿ ನೊವೆನಾ (ವಿಶೇಷ ಸಿದ್ಧತಾ) ಪ್ರಾರ್ಥನೆಗಳು ಜರುಗಲಿವೆ. ಈ ಒಂಬತ್ತು ದಿನಗಳ ಕಾಲ ಪ್ರತಿದಿನ ಸಂಜೆ ವಿಶೇಷ ಬಲಿಪೂಜೆ ನಡೆಯಲಿದ್ದು, ಮಕ್ಕಳು ದೇವಮಾತೆಗೆ ಭಕ್ತಿಯಿಂದ ಹೂವುಗಳನ್ನು ಅರ್ಪಿಸಿ ಪ್ರಾರ್ಥಿಸುವ ಸುಂದರ ಸಂಪ್ರದಾಯ ನೆರವೇರಲಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಧರ್ಮಗುರುಗಳು, "ಕನ್ಯಾ ಮರಿಯಮ್ಮನವರು ಪ್ರೀತಿ, ಕರುಣೆ, ತ್ಯಾಗ ಮತ್ತು ಭಕ್ತಿಯ ಸಂಕೇತ. ಅವರ ಹುಟ್ಟುಹಬ್ಬದ ಈ ಸಿದ್ಧತಾ ದಿನಗಳು ನಮ್ಮ ಕುಟುಂಬಗಳಲ್ಲಿ ಮತ್ತು ಸಮಾಜದಲ್ಲಿ ಒಗ್ಗಟ್ಟು, ಪ್ರೀತಿ ಹಾಗೂ ಶಾಂತಿಯನ್ನು ತರಲಿ. ದೇವಮಾತೆಯ ಕೃಪಾಕಟಾಕ್ಷ ಪ್ರತಿಯೊಬ್ಬರ ಮೇಲಿರಲಿ" ಎಂದು ಆಶೀರ್ವಚನ ನೀಡಿದರು. ಬಲಿಪೂಜೆಯ ನಂತರ ಆಗಮಿಸಿದ್ದ ಎಲ್ಲಾ ಭಕ್ತಾದಿಗಳಿಗೆ ದೇವಮಾತೆಯ ಪವಿತ್ರ ಪ್ರಸಾದವನ್ನು ವಿತರಿಸಲಾಯಿತು. ಸಿಂಧನೂರು ನಗರ ಹಾಗೂ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳಿಂದ ಆಗಮಿಸಿದ್ದ ಕ್ರೈಸ್ತ ಬಾಂಧವರು ಹಾಗೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಪ್ರಾರ್ಥನೆ ಸಲ್ಲಿಸಿ ದೇವಮಾತೆಯ ಆಶೀರ್ವಾದ ಪಡೆದುಕೊಂಡರು. ಬರುವ ಸೆಪ್ಟೆಂಬರ್ 8 ರಂದು ಕನ್ಯಾ ಮ-ರಿಯಮ್ಮನವರ ಮುಖ್ಯ ಜನನ ಮಹೋತ್ಸವವು ಅತ್ಯಂತ ವೈಭವದಿಂದ ನಡೆಯಲಿದ್ದು, ಈ ಮಹಾಪೂಜೆಯಲ್ಲಿ ಸಾರ್ವಜನಿಕರು ಹಾಗೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ಪವಿತ್ರ ಕೃಪೆಗೆ ಪಾತ್ರರಾಗಬೇಕಾಗಿ ಚರ್ಚಿನ ಆಡಳಿತ ಮಂಡಳಿ ವಿನಂತಿಸಿದೆ.




## ಸಣ್ಣ ಉದ್ಯಮಿಗೆ ಪ್ರವಾಸೋದ್ಯಮ ಇಲಾಖೆ ಆಸರೆ: ಶಾಸಕ ಜೆ.ಎನ್.ಗಣೇಶ್ ಅವರಿಂದ ಮೊಬೈಲ್ ಕ್ಯಾಂಟೀನ್ ವಾಹನ ವಿತರಣೆ

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕುರುಗೋಡು : ಪ್ರವಾಸೋದ್ಯಮ ಇಲಾಖೆಯ ವತಿಯಿಂದ 2024- 25ನೇ ಸಾಲಿನ ಎಸ್.ಸಿ.ಎಸ್.ಪಿ/ಟಿ.ಎ ಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸುವ ಸಲುವಾಗಿ ಹಮ್ಮಿಕೊಂಡಿದ್ದ ತರಬೇತಿಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಕುರುಗೋಡಿನ ಶಾಸಕರ ಕಾರ್ಯಾಲಯದ ಬಳಿ ಗುರುವಾರ ಕಂಪ್ಲಿ ವಿಧಾನಸಭಾ ಕ್ಷೇತ್ರದ ಶಾಸಕ ಜೆ.ಎನ್.ಗಣೇಶ್ ಅವರು ಮೊಬೈಲ್ ಕ್ಯಾಂಟೀನ್ ವಾಹನಗಳನ್ನು ಹಸ್ತಾಂತರಿಸಿದರು.**

ಮೊಬೈಲ್ ಕ್ಯಾಂಟೀನ್ ವಾಹನ ಖರೀದಿಸಲು ಪ್ರವಾಸೋದ್ಯಮ ಇಲಾಖೆಯಿಂದ ರೂ. 5 ಲಕ್ಷಗಳ ಸಹಾಯಧನ ಒದ ಗಿಸಲಾಗಿದೆ. ಫಲಾನುಭವಿಯ ಶೇ. 5 ರಷ್ಟು ವಂತಿಗೆ ಹಾಗೂ ಉಳಿದ ಮೊತ್ತವನ್ನು ಹಣಕಾಸು ಸಂಸ್ಥೆ ಅಥವಾ ಬ್ಯಾಂಕ್ ಸಾಲದ ಮೂಲಕ ಭರಿಸಿ ವಾಹನಗಳನ್ನು ಖರೀದಿಸಿ ವಿತರಿಸಲಾಗಿದೆ.

ಬಳ್ಳಾರಿ ಜಿಲ್ಲೆಗೆ ಆಯ್ಕೆಯಾದ ಪರಿಶಿಷ್ಟ ಜಾತಿಯ 03 ಹಾಗೂ ಪರಿಶಿಷ್ಟ ಪಂಗಡದ 01 ಸೇರಿದಂತೆ ಒಟ್ಟು 04 ಫಲಾನುಭವಿಗಳಿಗೆ ಈ ವಾಹನಗಳನ್ನು ವಿತರಿಸಲಾಯಿತು. ಅಭ್ಯರ್ಥಿಯ ವಯಸ್ಸು ಮತ್ತು 10ನೇ ತರಗತಿಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯು ಅರ್ಹರನ್ನು ಆಯ್ಕೆ ಮಾಡಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ವತಿಯಿಂದ ಈಗಾಗಲೇ ಒಂದು ತಿಂಗಳ ಉದ್ಯಮಶೀಲತಾ ತರಬೇತಿ ನೀಡಲಾಗಿದೆ.

ಈ ಸಂದರ್ಭದಲ್ಲಿ ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕ ಪ್ರಭುಲಿಂಗ ಎಸ್.ತಳಕೇರಿ, ರಾಜಲಕ್ಷ್ಮಿ ಮೋಟರ್ಸ್‌ನ ಮಾಲೀಕರಾದ ಜಯರಾಜ್ ಸಿಂಗ್, ವ್ಯವಹಾರ ವ್ಯವಸ್ಥಾಪಕರಾದ ( Bussines Head ) ಮಹೇಶ ಮರಿಯಮ್ಮನಹಳ್ಳಿ, ಸೇಲ್ಸ್ ಮೇನೇಜರ್ ಕೆ. ಅಂಬರೇಶ್, ಮಂಜುನಾಥ, ಸೇರಿದಂತೆ ಮುಖಂಡರು, ಫಲಾನುಭವಿಗಳಾದ, ರಾಘವೇಂದ್ರ, ತಿಪ್ಪೇಸ್ವಾಮಿ, ಬೋವಿ ರಾಮರೆಡ್ಡಿ, ಬಸವರಾಜ್ ಸೇರಿದಂತೆ ಇತರರಿದ್ದರು.



## ವಚನ ದರ್ಶನ

ದಯವಿಲ್ಲದ ಧರ್ಮವದೇವುದಯ್ಯ, ದಯವೇ ಬೇಕು
ಸರ್ವಪ್ರಾಣಿಗಳೆಲ್ಲರಲ್ಲಿ!ದಯವೇ ಧರ್ಮದ ಮೂಲವಯ್ಯ.
ಕೂಡಲಸಂಗಯ್ಯನಂತಲ್ಲದೊಲ್ಲ ಕಂಡಯ್ಯ

ದಯವಿಲ್ಲದ ಧರ್ಮವಾವುದಯ್ಯಾ" ಎಂಬುದು 12ನೇ ಶತಮಾನದ ಸಾಮಾಜಿಕ ಕ್ರಾಂತಿಕಾರಿ, ಜಗಜ್ಯೋತಿ ಶ್ರೀ ವಿಶ್ವಗುರು ಬಸವಣ್ಣನವರು ರಚಿಸಿದ ಅತ್ಯಂತ ಪ್ರಸಿದ್ಧ ವಚನವಾಗಿದೆ.

ದಯವೇ ಪ್ರಧಾನ. ಜಗತ್ತಿನಲ್ಲಿ ಕರುಣೆ ಅಥವಾ ದಯೆ ಇಲ್ಲದಿದ್ದರೆ, ಆ ಆಚರಣೆಯನ್ನು ಧರ್ಮ ಎಂದು ಕರೆಯಲು ಸಾಧ್ಯವಿಲ್ಲ.ವಿಶ್ವಪ್ರೇಮ. ಕೇವಲ ಮನುಷ್ಯರಷ್ಟೇ ಅಲ್ಲದೆ, ಭೂಮಿಯ ಮೇಲಿರುವ ಸಕಲ ಜೀವರಾಶಿಗಳ ಮೇಲೂ ಕರುಣೆ ಇರಬೇಕು.ಧರ್ಮದ ಅಡಿಪಾಯ. ಭಗವಂತನಾದ ಕೂಡಲಸಂಗಮದೇವನು ದಯೆಯಿಲ್ಲದ ಯಾವುದೇ ಬಾಹ್ಯ ಆಡಂಬರದ ಆಚರಣೆಗಳನ್ನು ಒಪ್ಪುವುದಿಲ್ಲ.

ಮನುಷ್ಯನು ಮನುಷ್ಯನನ್ನಾಗಿ ನೋಗಬೇಕು. ಮನದಲ್ಲಿ ಕತ್ತರೆ ಬಾಯಲ್ಲಿ ಬೆಲ್ಲದ ಹಚ್ಚು ಇದ್ದರೆ ಶರಣರು ಒಪ್ಪುವುದಿಲ್ಲ ದಯೆ ಎನ್ನುವುದು ಬರಿ ಪ್ರಾಣಿಗಳಲ್ಲಿ ಅಷ್ಟೇ ಅಲ್ಲ. ಎಂಬತ್ತನಾಲ್ಕು ಲಕ್ಷ ಜೀವರಾಶಿಗಳಲ್ಲಿಯೂ ದಯೆಬೇಕು ಎನ್ನಬಹುದು ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ–ಸಿಂಧನೂರು. 998094144

# ಜಾಲಹಳ್ಳಿ ಸರ್ವೆ ನಂ.132ರ ಬಡಾವಣೆಗೆ ಗ್ರಾಪಂ ಅಧ್ಯಕ್ಷರು, ಪಿಡಿಓ ಭೇಟಿ
## ರಸ್ತೆ–ಚರಂಡಿ ವ್ಯವಸ್ಥೆ ಕಲ್ಪಿಸದಿದ್ದರೆ ಎರಡು ದಿನಗಳ ಬಳಿಕ ಪೊಲೀಸ್ ಪ್ರಕರಣ: ಪಿಡಿಓ ಲಕ್ಷ್ಮಿ ಎಚ್ಚರಿಕೆ

❑ ನೈಜ್ಯ ದೆಸೆ ನ್ಯೂಸ್

**ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದ ಸರ್ವೆ ನಂ.132ರ ಬಡಾವಣೆಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯ ನಡುವೆಯೇ ಮನೆಗಳ ನಿರ್ಮಾಣ ನಡೆಯುತ್ತಿರುವ ಹಿನ್ನೆಲೆಯಲ್ಲಿ ಜಾಲಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಅಧಿಕಾರಿಗಳು ಶುಕ್ರವಾರ ಬಡಾವಣೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.**

ಬಡಾವಣೆಯಲ್ಲಿ ರಸ್ತೆ, ಚರಂಡಿ ಹಾಗೂ ವಿದ್ಯುತ್ ಕಂಬಗಳ ವ್ಯವಸ್ಥೆ ಸೇ–ರಿದಂತೆ ಅಗತ್ಯ ಮೂಲಸೌಕರ್ಯಗಳ ಕೊರತೆ ಇದೆ ಎಂದು ಸಾರ್ವಜನಿಕರು ದೂರು ನೀಡಿದ್ದರು. ಅಲ್ಲದೆ, ಗಾರ್ಡನ್ ಹಾಗೂ ರಸ್ತೆ ನಿರ್ಮಾಣ–ಕ್ಕಾಗಿ ಮೀಸಲಿಟ್ಟಿರುವ ಜಾಗಗಳನ್ನು ಒತ್ತುವರಿ ಮಾಡಲಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿತ್ತು.

ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿ ಆಡಳಿತ ಮಂಡಳಿ ಹಾಗೂ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಬಡಾವಣೆಯ ಸ್ಥಿತಿಗತಿಗಳನ್ನು ಪರಿಶೀಲಿಸಿದರು. ಮೂಲಭೂತ ಸೌಕರ್ಯಗಳನ್ನು ಕಲ್ಪಿಸದೆ ನಿವೇಶನಗಳ ಅಭಿವೃದ್ಧಿ ಹಾಗೂ ಮನೆಗಳ ನಿರ್ಮಾಣ ನಡೆಯುತ್ತಿರುವ ಕು–ರಿತು ಅಧಿಕಾರಿಗಳು ಪರಿಶೀಲನೆ ನಡೆಸಿದರು.



### ‘ಕೂಡಲೇ ಮೂಲಸೌಕರ್ಯ ಕಲ್ಪಿಸಲು ಕ್ರಮ”

**ಗ್ರಾಮ ಪಂಚಾಯಿತಿ ಸದಸ್ಯ ಮಕ್ತುಮ್ ಪರಾಶಿ ಮಾತನಾಡಿ, “ಬಡಾವಣೆಯಲ್ಲಿ ರಸ್ತೆ, ಚರಂಡಿ ಹಾಗೂ ವಿದ್ಯುತ್ ಕಂಬಗಳ ವ್ಯವಸ್ಥೆ ಇಲ್ಲದೆ ಮನೆಗಳ ನಿರ್ಮಾಣ ನಡೆಯುತ್ತಿದೆ. ಈ ಹಿಂದೆ ಡಿವೈ–ಎಫ್ಐ ಹೋರಾಟದ ಸಂದರ್ಭದಲ್ಲಿ ಸಮಸ್ಯೆಯನ್ನು ಪ್ರಸ್ತಾಪಿಸಲಾಗಿತ್ತು. ಅದರ ಪರಿಣಾಮವಾಗಿ ಇದೀಗ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದ್ದಾರೆ. ಕೂಡಲೇ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಪಿಡಿಓ ಅವರು ಭರವಸೆ ನೀಡಿದ್ದಾರೆ,” ಎಂದು ತಿಳಿಸಿದರು**

**ಬಡಾವಣೆ ಮಾಲೀಕರಿಗೆ ಗ್ರಾಮ ಪಂಚಾಯಿತಿ ವತಿಯಿಂದ ಈಗಾಗಲೇ ಮೂರು ಬಾರಿ ನೋಟಿಸ್ ನೀಡಿದ್ದರೂ, ಇದುವರೆಗೂ ರಸ್ತೆ, ಚರಂಡಿ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಿಲ್ಲ ಎಂದು ಪಿಡಿಓ ಶ್ರೀಮತಿ ಲಕ್ಷ್ಮಿ ತಿಳಿಸಿದ್ದಾರೆ.**

**ಇದೀಗ ಬಡಾವಣೆ ಮಾಲೀಕ–ರಿಗೆ ಮತ್ತೆರಡು ದಿನಗಳ ಕಾಲಾವಕಾಶ ನೀಡಲಾಗಿದೆ. ಈ ಅವಧಿಯಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸದಿದ್ದರೆ ಜಾಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಪಿಡಿಓ ಲಕ್ಷ್ಮಿ ಅವರು ದೂರವಾಣಿ ಮೂಲಕ ಬಡಾವಣೆ ಮಾಲೀಕರಿಗೆ ಎಚ್ಚರಿಕೆ ನೀಡಿದ್ದಾರೆ.**

ಈ ಹಿಂದೆ ಡಿವೈಎಫ್ಐ ವತಿಯಿಂದ ನಡೆದ 16 ದಿನಗಳ ಹೋರಾಟದಲ್ಲಿಯೂ ಬಡಾವಣೆಯ ಮೂಲಭೂತ ಸೌಕರ್ಯಗಳ ಸಮಸ್ಯೆಯನ್ನು ಪ್ರಸ್ತಾಪಿಸಲಾಗಿತ್ತು. ಇದೀಗ ಗ್ರಾಮ ಪಂಚಾಯಿತಿ ಆಡಳಿತ ಮಂಡಳಿ ಹಾಗೂ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಕ್ರಮಕ್ಕೆ ಮುಂದಾಗಿರುವುದು ಸಾರ್ವಜನಿಕರಲ್ಲಿ ನಿರೀಕ್ಷೆ ಮೂಡಿಸಿದೆ.

ಈ ಸಂದರ್ಭದಲ್ಲಿ ಊರಿನ ಮುಖಂಡರಾದ ಶ್ರೀಧರ್ ದೇಸಾಯಿ, ದುರುಗಪ್ಪ ರಾಮಪಾಳಿ, ಬಾಬಾ ಮೆಡಿಕಲ್, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ವೀರೇಶ್ ಅರಕೇರಿ, ಸದಸ್ಯರಾದ ಮಕ್ತುಮ್ ಪರಾಶಿ, ಕುಮಾರ್ ಚಪ್ಪಳಕಿ, ಪಿಡಿಓ ಶ್ರೀಮತಿ ಲಕ್ಷ್ಮಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಅಯ್ಯಪ್ಪ, ಬಿಲ್ ಕಲೆಕ್ಟರ್ ವೆಂಕೋಬ, ಸಿಬ್ಬಂದಿ ಬಸವರಾಜ್ ಹಾಗೂ ಮುಖಂಡರಾದ ಮೌನೇಶ್ ಚಪ್ಪಳಕಿ, ಅಮನ್ ಖುರೇಶಿ, ದಾದು, ಆರಿಫ್ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

## ತೆಕ್ಕಲಕೋಟೆ ಡೆಂಕ್ಲಮ್ಮ ಗುಡ್ಡದಲ್ಲಿ ಚಿರತೆ ಪ್ರತ್ಯಕ್ಷ, ಬೋನು ಇಟ್ಟ ಅರಣ್ಯ ಇಲಾಖೆ

❑ ನೈಜ್ಯ ದೆಸೆ ನ್ಯೂಸ್

**ತೆಕ್ಕಲಕೋಟೆ: ಪಟ್ಟಣದ ಪ್ರಾಗೈತಿಹಾಸಿಕ ಕಾಲದ ಬೆಟ್ಟಸಾಲುಗಳ ಡೆಂಕ್ಲಮ್ಮ ಗುಡ್ಡದಲ್ಲಿ ಕೆಲದಿನಗಳಿಂದ ಚಿರತೆ ಕಾಣಿಸಿಕೊಂಡಿದೆ ಎಂದು ಕುರಿಗಾಹಿಗಳು ಮಾಹಿತಿನೀಡಿದ್ದು,ಅರಣ್ಯ ಇಲಾಖೆಯು ಚಿರತೆಯ ಸೆರೆಗೆ ಬೋನು ಇಟ್ಟಿದ್ದಾರೆ.**




ಈ ಕುರಿತು ಚಿರತೆ ರಸ್ತೆ ಬಳಿ ಕಾಣಿಸಿಕೊಂಡ ಚಿತ್ರ ವ್ಯಾಪಕವಾಗಿ ಹರಡಿದೆ. ಅಲ್ಲದೆ ಯುವಕರು ಎಚ್ಚರಿಕೆ ಸಂದೇಶವನ್ನು ವ್ಯಾಟ್ಸಅಪ್‌ನಲ್ಲಿ ಕಳುಹಿಸಿ ಸಂಜೆ ಅಥವಾ ರಾತ್ರಿ ವೇಳೆ ಈ ರಸ್ತೆಯಲ್ಲಿ ಸಂಚರಿಸಬಾರದು ಎಂದು ವಿನಂತಿಸಿದ್ದಾರೆ. ‘ಚಿರತೆ ಕಾಣಿಸಿಕೊಂಡ ಸ್ಥಳ ಪರಿಶೀಲಿಸಿದ್ದು, ಚಿರತೆಯ ಹೆಜ್ಜೆ ಗುರುತುಗಳು ಕಂಡುಬಂದಿವೆ. ಇದರಿಂದಾಗಿ ಬೋನು ಅಳವಡಿಸಿ, ಪ್ರಾಣಿಯ ಚಲನವಲನ ಕುರಿತು ಮಾಹಿತಿ ಸಂಗ್ರಹಿಸುತ್ತಿರುವುದಾಗಿ. ಇಲ್ಲಿ ಕತ್ತೆಕಿರುಬ (ಹೈನಾ) ಇರುವ ಸಾಧ್ಯತೆ ಹೆಚ್ಚಿದ್ದು, ಸ್ಥಳ ಪರಿಶೀಲಿಸಿದಾಗ ಹೆಜ್ಜೆ ಗುರುತು ಪತ್ತೆಯಾಗಿವೆ ಎಂದು ಸಿರುಗುಪ್ಪ ತಾಲ್ಲೂಕು ವಲಯ ಅರಣ್ಯಾಧಿಕಾರಿ ಕಾಂತರಾಜು ತಿಳಿಸಿದ್ದಾರೆ.

ವರದಿ : ಮಸೀದಿ ,ಅಬ್ದುಲ್ ಗೌಸ್, ಸಿರುಗುಪ್ಪ

## ಕೃಷ್ಣ ಜನ್ಮಾಷ್ಟಮಿ : ರಾಷ್ಟ್ರಪತಿ,ಪ್ರಧಾನಿ ಸೇರಿ ಗಣ್ಯರ ಶುಭಾಶಯ

❑ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಕೃಷ್ಣ ಜನ್ಮಾಷ್ಟಮಿಯ ಶುಭ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಹಲವು ಪ್ರಮುಖ ನಾಯಕರು ದೇಶದ ಜನತೆಗೆ ಹೃತ್ಪೂರ್ವಕ ಶುಭಾಶಯಗಳನ್ನು ಕೋರಿದ್ದಾರೆ.**



ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಾಮಾಜಿಕ ಮಾಧ್ಯಮ 'ಎಕ್ಸ್' ನಲ್ಲಿ ಪೋಸ್ಟ್ ಮಾಡಿ, “ಭಗವಾನ್ ಶ್ರೀಕೃಷ್ಣನ ದಿವ್ಯ ಸಂದೇಶಗಳಲ್ಲಿ ನಿಷ್ಕಾಮ ಕರ್ಮದ (ಫಲಾಪೇಕ್ಷೆಯಿಲ್ಲದ ಕರ್ತವ್ಯ) ಪ್ರೇರಣೆಯಿದೆ. ಇದು ಮಾನವಕುಲಕ್ಕೆ ಸದಾ ದಾರಿದೀಪವಾಗಿದೆ. ಭಕ್ತಿ ಮತ್ತು ಆರಾಧನೆಗೆ ಸಮರ್ಪಿತವಾದ ಈ ಪವಿತ್ರ ಹಬ್ಬವು ಎಲ್ಲರ ಜೀವನದಲ್ಲೂ ಧನಾತ್ಮಕ ಶಕ್ತಿ ಮತ್ತು ಶಕ್ತಿಯನ್ನು ತುಂಬಲಿ” ಎಂದು ಹಾರೈಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತಮ್ಮ ಸಂದೇಶದಲ್ಲಿ, “ಭಗವಾನ್ ಶ್ರೀಕೃಷ್ಣನ ಜೀವನ ಮತ್ತು ಬೋಧನೆಗಳು ಭಾರತೀಯ ಸಂಸ್ಕೃತಿ ಮತ್ತು ತತ್ತ್ವಶಾಸ್ತ್ರಕ್ಕೆ ಹೊಸ ಚೈತನ್ಯವನ್ನು ತುಂಬುತ್ತವೆ. ಅವರು ಸತ್ಯ, ಧರ್ಮ, ನ್ಯಾಯ ಮತ್ತು ಕರುಣೆಯ ಹಾದಿಯನ್ನು ತೋರಿಸಿದ್ದಾರೆ. ಕೃಷ್ಣನ ಆದರ್ಶಗಳನ್ನು ಅಳವಡಿಸಿಕೊಳ್ಳುವ ಮೂಲಕ ಸಮಗ್ರ ಮತ್ತು ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸಲು ನಾವೆಲ್ಲರೂ ಸಂಕಲ್ಪ ಮಾಡೋಣ” ಎಂದು ಕರೆ ನೀಡಿದ್ದಾರೆ.

# 2028ರಲ್ಲಿ ಬಳ್ಳಾರಿ ಜಿಲ್ಲೆಯ 10 ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು: ಜನಾರ್ದನ ರೆಡ್ಡಿ

❑ ನೈಜ್ಯ ದೆಸೆ ನ್ಯೂಸ್

**ಸಿರುಗುಪ್ಪ: 2028ರ ವಿಧಾನಸಭಾ ಚುನಾವಣೆಯಲ್ಲಿ ಅಖಂಡ ಬಳ್ಳಾರಿ ಜಿಲ್ಲೆಯ 10 ಕ್ಷೇತ್ರಗಳಲ್ಲೂ ಬಿಜೆಪಿ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ಮಾಜಿ ಸಚಿವ ಜನಾರ್ದನ ರೆಡ್ಡಿ ವಿಶ್ವಾಸ ವ್ಯಕ್ತಪಡಿಸಿದರು.**

ತೆಕ್ಕಲಕೋಟೆ ಪಟ್ಟಣದ ಮಾಜಿ ಶಾಸಕ ಎಂ.ಎಸ್. ಸೋಮಲಿಂಗಪ್ಪ ನಿವಾಸದ ಆವರಣದಲ್ಲಿ ಬುಧವಾರ ನಡೆದ ಬಿಜೆಪಿ ಪಾದಯಾತ್ರೆಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಯುವಕರು, ಮಹಿಳೆಯರು, ರೈತರು ಹಾಗೂ ಬಡವರಿಗೆ ಸೇರಬೇಕಿದ್ದ ಹಣ ದುರ್ಬಳಕೆಯಾಗಿದೆ. ಈ ಹಣವನ್ನು ತೆಲಂಗಾಣ ಮತ್ತು ಸಂಡೂರು ಚುನಾವಣೆಗಳಿಗೆ ಬಳಸಲಾಗಿದೆ ಎಂದು ಅವರು ಕಾಂಗ್ರೆಸ್ ಸರ್ಕಾರದ ವಿರುದ್ಧ ಆರೋಪಿಸಿದರು.

‘ಕಾಂಗ್ರೆಸ್ ಪಕ್ಷ ನನ್ನನ್ನು 14 ವರ್ಷಗಳ ಕಾಲ ಬಳ್ಳಾರಿಯಿಂದ ದೂರವಿಟ್ಟಿತ್ತು. ಜನಾರ್ದನ ರೆಡ್ಡಿ ಬಳ್ಳಾರಿಯಲ್ಲಿ ಇರಬಾರದು ಎಂಬ ಕಾರಣ–ಕ್ಕೆ ಜೈಲಿಗೆ ಕಳುಹಿಸಲಾಯಿತು. ನಾನು ಹೊರಗಿದ್ದರೆ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಸಾಧ್ಯವಿಲ್ಲ ಎಂಬ ಭಯ ಕಾಂಗ್ರೆಸ್ ನಾಯಕರಲ್ಲಿತ್ತು’ ಎಂದರು. ಡಿ.ಕೆ ಶಿವಕುಮಾರ್ ಅವರು ಎರಡು ತಿಂಗಳು ಜೈಲಿನಲ್ಲಿದ್ದ ಸಂದರ್ಭದಲ್ಲಿ ತಮಗಾದ ಕಷ್ಟಗಳನ್ನು ಹೇಳಿಕೊಂಡಿದ್ದರು. ಆದರೆ ತಾವು 43 ತಿಂಗಳು ಜೈಲಿನಲ್ಲಿದ್ದ ವಿಚಾರವನ್ನು ಅವರು ಮರೆತಿ–ದ್ದಾರೆ ಎಂದು ಜನಾರ್ದನ ರೆಡ್ಡಿ ವ್ಯಂಗ್ಯವಾಡಿದರು.

ಕಾಂಗ್ರೆಸ್ ನಾಯಕರು ತಮ್ಮನ್ನು ಪಕ್ಷಕ್ಕೆ ಕರೆತರಲು ಪ್ರಯತ್ನಿಸಿದ್ದರು. ಇಲ್ಲವಾದರೆ ಗಣಿಗಾ–ರಿಕೆ ಬಂದ್ ಮಾಡಿ ಬಂಧಿಸಬೇಕು ಎಂಬ ಚರ್ಚೆ ನಡೆದಿತ್ತು ಎಂದು ಅವರು ಹೇಳಿದರು. ಸುಷ್ಮಾ ಸ್ವರಾಜ್ ಅವರಿಗೆ ದ್ರೋಹ ಮಾಡಿ ಬಿಜೆಪಿ ಪಕ್ಷಕ್ಕೆ ಬೆನ್ನಿಗೆ ಚೂರಿ ಹಾಕುವುದಿಲ್ಲ ಎಂದು ಆಗಲೇ ಸ್ಪಷ್ಟಪಡಿಸಿದ್ದಾಗಿ ತಿಳಿಸಿದರು.

‘ಬರ ಪರಿಸ್ಥಿತಿಯಲ್ಲಿ ಶಾಸಕ ಸ್ಪಂದಿಸಿಲ್ಲ’ : ಮಾಜಿ ಶಾಸಕ ಎಂ.ಎಸ್. ಸೋಮಲಿಂಗಪ್ಪ ಮಾತನಾಡಿ, ರಾಜ್ಯದಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ ಎಂಬುದಕ್ಕೆ ಶಾಸಕ ನಾಗೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವುದೇ ಸಾಕ್ಷಿ ಎಂದು ಆರೋಪಿಸಿದರು.




ಸಿರುಗುಪ್ಪ ತಾಲೂಕಿನಲ್ಲಿ ಬರ ಪರಿಸ್ಥಿತಿ ಇದ್ದರೂ ಶಾಸಕ ಜನರ ನೆರವಿಗೆ ಬಂದಿಲ್ಲ. ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸುವಂತೆ ತಾವು ಈಗಾಗಲೇ ಒತ್ತಾಯಿಸಿದ್ದೇವೆ. ಆದರೆ ಹಚ್ಚೊಳ್ಳಿ ಹೋಬಳಿಯನ್ನು ಹೊರತುಪಡಿಸಿ ಉಳಿದ ಪ್ರದೇಶವನ್ನು ಬರಪೀಡಿತವೆಂದು ಘೋಷಿಸುವಂತೆ ಕಂದಾಯ ಸಚಿವರಿಗೆ ಮನವಿ ಸಲ್ಲಿಸಿರುವುದು ಈ ಭಾಗಕ್ಕೆ ಅನ್ಯಾಯವಾಗಿದೆ ಎಂದು ದೂರಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು, ತಾಲೂಕು ಘಟಕದ ಅಧ್ಯಕ್ಷ ಕೆ. ಮಲ್ಲಿಕಾರ್ಜುನಸ್ವಾಮಿ, ಕೆ.ಎಸ್. ದಿವಾಕರ, ದಮ್ಮೂರು ಶೇಖರ್, ಹನುಮಂತಪ್ಪ, ನಿಟ್ಟೂರು ಮರೇಗೌಡ, ಶರಣ ಬಸವ, ಮೇಕೆಲಿ ವೀರೇಶ, ಬಿ. ದೊಡ್ಡಯ್ಯ, ಚಾಗಿ ಸುಬ್ಬಯ್ಯ, ವೀರನಗೌಡ ಸೇರಿದಂತೆ ಕಾರ್ಯಕರ್ತರು ಇದ್ದರು.

# ಇಂದು ಸೀರತ್ ಸಾರ್ವಜನಿಕ ಸಮಾರಂಭ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ : ಜಮಾಅತೆ ಇಸ್ಲಾಮಿ ಹಿಂದ್ ರಾಜ್ಯ ಘಟಕವು ಆಗಸ್ಟ್ 26 ರಿಂದ ಸೆಪ್ಟಂಬರ್ 06 ವರೆಗೆ ಹಮ್ಮಿಕೊಂಡ ರಾಜ್ಯಮಟ್ಟದ ಅಭಿಯಾನದ ಅಂಗವಾಗಿ ಸ್ಥಳೀಯ ನಗರ ಶಾಖೆಯು ಇಂದು ಸೆ.5 ಶನಿವಾರ ದಂದು ಸರ್ವಧರ್ಮೀಯರಿಗಾಗಿ ಸೀರತ್ ಸಮಾರಂಭವನ್ನು ಹಮ್ಮಿಕೊಂಡಿದೆ.**

ಇಂದು ಪಟ್ಟಣದ ಶ್ರೀ ವಿಠ್ಠಲ ಮಂದಿರದಲ್ಲಿ ಸಂಜೆ 7.30 ಗಂಟೆಗೆ ನಡೆಯಲಿರುವ ಈ ಸಮಾರಂಭದ ದಿವ್ಯ ಸಾನಿಧ್ಯವನ್ನು ತಾಳಿಕೋಟೆ ಶ್ರೀ ಖಾಸ್ಗತೇಶ್ವರ ಮಠದ ಪೂಜ್ಯ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು, ವಿಪಿಎಂ ಶಾಲೆ




ಮುಖ್ಯಸ್ಥರಾದ ಫಾದರ್ ಸುನೀಲ ಅಂದ್ರಾದೆ, ಮುಸ್ಲಿಂ ಧಾರ್ಮಿಕ ಮುಖಂಡ ಸೈಯದ್ ಶಕೀಲ್ ಅಹ್ಮದ್ ಖಾಜಿ ಅವರು ವಹಿಸುವರು.

ಮುಖ್ಯ ಅತಿಥಿಗಳಾಗಿ ಮುದ್ದೇಬಿಹಾಳ ಮತಕ್ಷೇತ್ರ ಶಾಸಕರಾದ ಸಿ.ಎಸ್. ನಾಡಗೌಡ (ಅಪ್ಪಾಜಿ) ಅವರು ಆಗಮಿಸುವರು. ನಾಡಿನ ಖ್ಯಾತ ಲೇಖಕರಾದ ಯೋಗೇಶ ಮಾಸ್ಟರ್, ಬೆಂಗಳೂರು ವಿಶೇಷ ಆಹ್ವಾನಿತರಾಗಿರುವರು. ಪ್ರವಚನಕಾರ ಲಾಲಹುಸೇನ ಕಂದಗಲ್ಲ ವಿಶೇಷ ಉಪನ್ಯಾಸ ನೀಡುವರು.


ಜಮಾಅತೆ ಇಸ್ಲಾಮಿ ಹಿಂದ್ ವಲಯ ಸಂಚಾಲಕ ಮೌಲಾನಾ ಅಬ್ದುಲ್ ಖಾದೀರ ಸೌದಾಘರ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ವಿ.ವಿ.ಸಂಘದ ಅಧ್ಯಕ್ಷ ವಿ.ಸಿ. ಹಿರೇಮಠ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಡಾ. ಪ್ರಭುಗೌಡ ಲಿಂಗದಳ್ಳಿ, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಡಾ. ವಿ.ಎಸ್. ಕಾರ್ಚಿ, ಬಿಜೆಪಿ ಜಿಲ್ಲಾ ಮಾಜಿ ಅಧ್ಯಕ್ಷ ಆರ್.ಎಸ್. ಪಾಟೀಲ (ಕೂಚಬಾಳ), ಕದಳಿ ವೇದಿಕೆ ತಾಳಿಕೋಟೆ ತಾಲೂಕ ಅಧ್ಯಕ್ಷೆ ಉಮಾ ಬಸವರಾಜ ಸಾಲಂಕಿ, ಜ.ಇ.ಹಿ. ಮಹಿಳಾ ವಿಭಾಗದ ಸಂಚಾಲಕಿ ಖುರ್ಶಿದ ಮೊಮೀನ ಹಾಗೂ ಇತರರು ಆಗಮಿಸುವರು.

ಈ ಭಾವೈಕ್ಯತಾ ಸಮಾರಂಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಅಭಿಯಾನದ ಸಂಚಾಲಕ ಎಂ.ಎ. ಮೇತ್ರಿ (ಇಂಜಿನಿಯರ್) ಹಾಗೂ ಉಪ ಸಂಚಾಲಕ ಹುಸೇನ ಪಟೇಲ ಪ್ರಕಟಣೆಯಲ್ಲಿ ಕೋರಿದ್ದಾರೆ.

## ವಿಶ್ವ ಪತ್ರಿಕಾ ವಿತರಕರ ದಿನಾಚರಣೆ ವಿತರಕರಿಗೆ ಸನ್ಮಾನಿಸಿ ಅಭಿನಂದಿಸಿದ: ಪತ್ರಕರ್ತ ವೀರೇಶ ಗಡ್ಡಿಮಾಳ

❑ ನೈಜ್ಯ ದೆಸೆ ನ್ಯೂಸ್

**ಪತ್ರಿಕಾ ವಿತರಕರು ಎಂದರೆ ಶ್ರಮಜೀವಿಗಳು ಮಳೆ, ಚಳಿ, ಗಾಳಿ, ಎನ್ನದೆ ಪ್ರತಿದಿನವೂ ಬೆಳಗಿನ ಜಾವದಲ್ಲಿ ಸಮಾಜದ ಕಣ್ಣನ್ನು ತೆರೆಸುವ ಸುದ್ದಿಯನ್ನು ಹೊತ್ತು ಹೋಯ್ದು, ಮನೆಮನೆಗೆ ತೆರಳಿ ಪತ್ರಿಕೆ ಹಂಚಿ ಸುದ್ದಿ ಮುಟ್ಟಿಸುವ ಕಾಯಕದಲ್ಲಿ ತೊಡಗಿರುವ ವಿತರಕ–ರಿಗೆ ಪತ್ರಕರ್ತ ವೀರೇಶ ಗಡ್ಡಿಮಾಳ ಅವರಿಂದ ಸನ್ಮಾನಿಸಿ ಗೌರವಿಸಿರುವುದು ಶ್ಲಾಘನೀಯವಾದದು ಎಂದು ಬಿಜೆಪಿ ಮುಖಂಡ ಕೆ.ಕರಿಯಪ್ಪ ಹೇಳಿದರು.**



ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಶುಕ್ರವಾರ ಸೆ.4 ವಿಶ್ವ ಪತ್ರಿಕಾ ವಿತರಕರ ದಿನಾಚರಣೆಯ ಅಂಗವಾಗಿ ಭಾಗವಹಿಸಿ ವಿತರಕರಿಗೆ ಸನ್ಮಾನಿಸಿ ಮಾತನಾಡಿದ ಅವರು, ಈ ಜಗತ್ತಿಗೆ ಸುದ್ದಿ ಕೊಡುವ ಪತ್ರಿಕೆಗಳು ಎಷ್ಟು ಮುಖ್ಯವೋ ಅಷ್ಟೇ ಪತ್ರಿಕಾ ವಿತರಕರು ಕೂಡ ಮುಖ್ಯ, ಅವರಿಲ್ಲಿದಿದ್ದರೆ, ಪತ್ರಿಕೆಗಳನ್ನು ಮನೆಮನೆಗೆ ತೆರಳಿ ಹಂಚುವುದು ಕಷ್ಟ, ಹೀಗಾಗಿ ಸರ್ಕಾರ ಅವರಿಗೆ ಮೂಲಭೂತ ಸೌಕರ್ಯಗಳು, ವಿಮೆ, ಒದಗಿಸಬೇಕು. ಜೊತೆಗೆ ಪತ್ರಿಕಾ ಸಂಸ್ಥೆಗಳು ಏಜೆಂಟರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರಿಗೆ ಹೆಚ್ಚಿನ ಆದಾಯ ಅಥ–ವಾ ಕಮಿಷನ್ ಸಿಗುವಹಾಗೆ ನೋಡಿಕೊಳ್ಳಬೇಕೆಂದರು.

ಇದೇ ವೇಳೆ ಪತ್ರಿಕಾ ಏಜೆಂಟ–ರು, ವಿತರಕರು, ಸೇರಿ 35 ಜನರಿಗೆ ಸನ್ಮಾನಿಸಿ, ಗೌರವಿಸಿ, ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ: ಹಿರಿಯ ಪತ್ರಕರ್ತರಾದ ಡಿ. ಎಚ್.ಕಂಬಳಿ, ಪ್ರಹ್ಲಾದ್ ಗುಡಿ, ಏಜೆಂಟರಾದ ಕೊಟ್ಟೂರಯ್ಯಸ್ವಾಮಿ, ಸೋಮನಾಥ, ಅಮರೇಶ, ನಜೀರ್ ಅಲಿ, ಅಮರೇಶ ಬುಕ್ ಸ್ಟಾಲ್, ನಾಗಭೂಷಣ, ಮಲ್ಲಿಕಾರ್ಜುನಯ್ಯಸ್ವಾಮಿ, ಸೇರಿದಂತೆ ವಿತರಕರು ಇದ್ದರು.


## ಶಾಸಕ ಹಂಪನಗೌಡ ಬಾದರ್ಲಿ ಅವರ ನಿರಂತರ ಒತ್ತಾಯಕ್ಕೆ ಫಲ ರೈತಾಪಿ ವರ್ಗದಲ್ಲಿ ಹರ್ಷ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಮಳೆ ಕೊರತೆ ಹಾಗೂ ಪ್ರತಿಕೂಲ ಹವಾಮಾನದಿಂದ ಸಂಕಷ್ಟಕ್ಕೆ ಸಿಲುಕಿದ್ದ ಸಿಂಧನೂರು ತಾಲೂಕಿನ ರೈತರ ಬಹುದಿನಗಳ ನಿರೀಕ್ಷೆಗೆ ಇದೀಗ ಸರ್ಕಾರದ ನಿರ್ಧಾರದಿಂದ ಆಶಾಕಿರಣ ಮೂಡಿದೆ. ಸಿಂಧನೂರು ತಾಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸುವಂತೆ ಮಾನ್ಯ ಮುಖ್ಯಮಂತ್ರಿಗಳಿಗೆ ಪತ್ರದ ಮೂಲಕ ನಿರಂತರವಾಗಿ ಒತ್ತಾಯಿಸಿ, ತಾಲೂಕಿನ ರೈತರ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಮನವಿ ಮಾಡಿದ್ದ ಮಾನ್ಯ ಶಾಸಕರಾದ ಶ್ರೀ ಹಂಪನಗೌಡ ಬಾದರ್ಲಿ ಸಾಹೇಬರ ಪ್ರಯತ್ನಕ್ಕೆ ಫಲ ದೊರೆತಿದೆ.

ಸಿಂಧನೂರು ತಾಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿರುವ ಹಿನ್ನೆಲೆಯಲ್ಲಿ ತಾಲೂಕಿನ ರೈತಾಪಿ ವರ್ಗದಲ್ಲಿ ಸಂತಸ ವ್ಯಕ್ತವಾಗಿದೆ. ಕೃಷಿಯನ್ನೇ ಜೀವನಾಧಾರವನ್ನಾಗಿ ಮಾಡಿಕೊಂಡಿರುವ ಸಾವಿರಾರು ರೈತ ಕುಟುಂಬಗಳಿಗೆ ಈ ಘೋಷಣೆ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರದ ನೆರವಿನ ನಿರೀಕ್ಷೆಯನ್ನು ಹೆಚ್ಚಿಸಿದೆ. ಸಮರ್ಪಕ ಮಳೆಯ ಕೊರತೆ, ಕೃಷಿ ಚಟುವಟಿಕೆಗಳಿಗೆ ಎದುರಾದ ಅಡಚಣೆ, ಬೆಳೆಗಳ ಮೇಲೆ ಉಂಟಾದ ಪರಿಣಾಮ, ಕೃಷಿ ವೆಚ್ಚದ ಹೆಚ್ಚಳ ಹಾಗೂ ಆದ–ಾಯದಲ್ಲಿ ಕುಸಿತ ಸೇರಿದಂತೆ ಹಲವು ಸಮಸ್ಯೆಗಳನ್ನು ರೈತರು ಎದುರಿಸುತ್ತಿದ್ದಾರೆ. ಒಂದು ಕಡೆ ಬೀಜ, ರಸಗೊಬ್ಬರ, ಕೀಟನಾಶಕ, ಕಾರ್ಮಿಕರು ಹಾಗೂ ಕೃಷಿ ಯಂತ್ರೋಪಕರಣಗಳ ವೆಚ್ಚ ಹೆಚ್ಚಾಗುತ್ತಿದ್ದರೆ, ಮತ್ತೊಂದೆಡೆ ನಿರೀಕ್ಷಿತ ಪ್ರಮಾಣದಲ್ಲಿ ಬೆಳೆ ಬಾರದಿರುವುದು ರೈತರ ಆರ್ಥಿಕ ಪರಿಸ್ಥಿತಿಯ ಮೇಲೆ ಗಂಭೀರ ಪರಿಣಾಮ ಬೀರಿದೆ.

ಇಂತಹ ಸಂದರ್ಭದಲ್ಲಿ ತಾಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿರುವುದು ರೈತರಿಗೆ ಸರ್ಕಾರದಿಂದ ಅಗತ್ಯ ಪರಿಹಾರ ಹಾಗೂ



ವಿವಿಧ ಬರ ಪರಿಹಾರ ಕ್ರಮಗಳು ದೊರೆಯುವ ನಿರೀಕ್ಷೆಯನ್ನು ಮೂಡಿಸಿದೆ. ಬೆಳೆ ಹಾನಿ ಸಮೀಕ್ಷೆ, ಅರ್ಹ ರೈತರಿಗೆ ಪರಿಹಾರ, ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಸೇರಿದಂತೆ ಬರ ಪರಿಸ್ಥಿತಿಯಿಂದ ಉಂಟಾಗುವ ಸಮಸ್ಯೆಗಳಿಗೆ ಸರ್ಕಾರದಿಂದ ಅಗತ್ಯ ಕ್ರಮಗಳು ಕೈಗೊಳ್ಳಬೇಕೆಂಬ ನಿರೀಕ್ಷೆ ರೈತರಲ್ಲಿದೆ. “ರೈತ ಉಳಿದರೆ ಮಾತ್ರ ಕೃಷಿ ಉಳಿಯುತ್ತದೆ; ಕೃಷಿ ಉಳಿದರೆ ಮಾತ್ರ ಗ್ರಾಮೀಣ ಆರ್ಥಿಕತೆ ಬಲವಾಗುತ್ತದೆ” ಎಂಬ ಆಶಯದೊಂದಿಗೆ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿರುವ ಶಾಸಕ ಹಂಪನಗೌಡ ಬಾದರ್ಲಿ ಅವರ ನಿರಂತರ ಪ್ರಯತ್ನಕ್ಕೆ ರೈತರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಬರಗಾಲ ಘೋಷಣೆಗೆ ಸಂಬಂಧಿಸಿದಂತೆ ಸರ್ಕಾರದ ಗಮನ ಸೆಳೆಯಲು ಶಾಸಕರು ಮುಖ್ಯಮಂತ್ರಿಗಳಿಗೆ ಪತ್ರದ ಮೂಲಕ ಮನವಿ ಸಲ್ಲಿಸಿ, ಸಿಂಧನೂರು ತಾಲೂಕಿನ ವಾಸ್ತವ ಪರಿಸ್ಥಿತಿಯನ್ನು ಸರ್ಕಾರದ ಗಮನಕ್ಕೆ ತಂದಿದ್ದರು. ರೈತರ ಸಂಕಷ್ಟದ ಸಂದರ್ಭದಲ್ಲಿ ಅವರ ಪರವಾಗಿ ಧ್ವನಿಯಾಗಿ, ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದ ಹಿನ್ನೆಲೆಯಲ್ಲಿ ಇದೀಗ ತಾಲೂಕು ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆಯಾಗಿರುವುದು ಜನಪರ ಕಾಳಜಿಗೆ ದೊರೆತ ಮಹತ್ವದ ಜಯ ಎಂದು ಸಾರ್ವಜನಿಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಸರ್ಕಾರದ ಈ ನಿರ್ಧಾರದಿಂದ ರೈತರಲ್ಲಿ ಸಂತಸ ಮನೆಮಾಡಿದ್ದು, “ನಮ್ಮ ಸಂಕಷ್ಟವನ್ನು ಸರ್ಕಾರದ ಗಮನಕ್ಕೆ ತಂದು ಬರಗಾಲ ಘೋಷಣೆಗೆ ನಿರಂತರವಾಗಿ ಪ್ರಯತ್ನಿಸಿದ ಶಾಸಕರಿಗೆ ಧನ್ಯವಾದಗಳು” ಎಂದು ರೈತರು ಹರ್ಷ ವ್ಯಕ್ತಪಡಿಸಿದ್ದಾರೆ. ಇನ್ನು ಮುಂದಿನ ದಿನಗಳಲ್ಲಿ ಬರಗಾಲದ ಹಿನ್ನೆಲೆಯಲ್ಲಿ ಅರ್ಹ ರೈತರಿಗೆ ತ್ವರಿತವಾಗಿ ಪರಿಹಾರ ದೊರೆಯಬೇಕು. ಬೆಳೆ ನಷ್ಟ ಅನುಭವಿಸಿರುವ ರೈತರನ್ನು ಗುರುತಿಸಿ ವೈಜ್ಞಾನಿಕವಾಗಿ ಬೆಳೆ ಹಾನಿ ಸಮೀಕ್ಷೆ ನಡೆಸಿ, ಅರ್ಹರಿಗೆ ಸೂಕ್ತ ಪರಿಹಾರ ನೀಡಬೇಕು. ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು. ಜಾನುವಾರುಗಳಿಗೆ ಮೇವು ಹಾಗೂ ನೀರಿನ ವ್ಯವಸ್ಥೆ ಮಾಡಬೇಕು. ರೈತರ ಸಾಲ, ಕೃಷಿ ವೆಚ್ಚ ಹಾಗೂ ಬೆಳೆ ನಷ್ಟದ ಪರಿಸ್ಥಿತಿಯನ್ನು ಪರಿಗಣಿಸಿ ಸರ್ಕಾರದಿಂದ ಅಗತ್ಯ ನೆರವು ದೊರೆಯಬೇಕು ಎಂಬುದು ರೈತಾಪಿ ವರ್ಗದ ಪ್ರಮುಖ ಆಶಯವಾಗಿದೆ. ಸಿಂಧನೂರು ತಾಲೂಕಿನ ರೈತರ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರದ ಗಮನ ಸೆಳೆದು ಬರಗಾಲ ಘೋಷಣೆಗೆ ಒತ್ತಾಯಿಸಿ ಯಶಸ್ವಿಯಾದ ಶಾಸಕ ಹಂಪನಗೌಡ ಬಾದರ್ಲಿ ಅವರ ಜನಪರ ಕಾಳ–ಜಿಗೆ ಮತ್ತೊಂದು ಮಹತ್ವದ ಜಯ ದೊರೆತಂತಾಗಿದೆ.

ತಾಲೂಕಿನ ರೈತರ ಪರವಾಗಿ ಸ್ಪಂದಿಸಿ ಬರಗಾಲ ಘೋಷಣೆಗೆ ಕ್ರಮ ಕೈಗೊಂಡ ಮಾನ್ಯ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹಾಗೂ ಮಾನ್ಯ ಕಂದಾಯ ಸಚಿವರಿಗೆ ರೈತಾಪಿ ವರ್ಗದ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳು ಸಲ್ಲಿಸಲಾಯಿತು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101